ಸಂಪುಟ : 9 ಸಂಚಿಕೆ 286 ಪುಟ : 4+2 ಬೆಲೆ: 3.00 ಗುರುವಾರ ಡಿಸೆಂಬರ್ 26 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 286 Pages : 4+2 Price : 3.00 Thursday December 26 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದು ಮಂಡಲ ಪೂಜೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮಣಿಕಂಠ ಸನ್ನಿಧಾನ ಸೇವಾ ಸಮಿತಿ (ರಿ) ಬುಳ್ಳಾನವರ ತೆ-ೋಟ ಭಾರತ ವೇರ್ ಹೌಸ್ ದಲ್ಲಿ ಪ್ರತಿ ವರ್ಷದಂತೆ ಈ ವರ್ಷವು ದಿನಾಂಕ 26-12-2024ರ ಗುರುವಾರ ಸಾಯಂಕಾಲ 7:30 ಕ್ಕೆ ವಿಶೇಷ ಮಂಡಲ ಪೂಜೆ ಜರಗುವುದು. ಈ ಬಾರಿ ಮಂಡಲ ಪೂಜೆಯನ್ನು ವರ ಪ್ರಸಾದ ಕುಟುಂಬದವರು ಮಾಡಿಸುತ್ತಿದ್ದು, ಕಾರಣ ಎಲ್ಲ ಅಯ್ಯಪ್ಪ ಭಕ್ತರು ಆಗಮಿಸಿ ಪಾಲ್ಗೊಳ್ಳಬೇಕು.

ಹಿರಿಯ ಗುರುಸ್ವಾಮಿಗಳಾದ ವಿರೂಪಾಕ್ಷ ಗುರುಸ್ವಾಮಿ, ನಾಗರಾಜ ಬಾಗಲಕೋಟ ಗುರುಸ್ವಾಮಿ ನೇತೃತ್ವದಲ್ಲಿ ನಡೆಯಲಿದೆ ಎಂದು ಆನಂದ ಕಂಬಳಿ ಗುರುಸ್ವಾಮಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪುರಾಣ ಪ್ರವಚನ ಜ.1ರಿಂದ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಸಮೀಪದ ಹೂವಿನಶಿಗ್ಲಿ ಮಠದ 46ನೇ ಜಾತ್ರಾ ಮಹೋತ್ಸವ, ಲಿಂ. ನಿರಂಜನ ಮಹಾಸ್ವಾಮಿಗಳ ಪುಣ್ಯಸ್ಮರಣೋತ್ಸವದ ಅಂಗವಾಗಿ ಶ್ರೀಮಠದಲ್ಲಿ ಜ. 1ರಿಂದ ಜ. 13ರವರೆಗೆ ಸಂಜೆ ಮುಳಗುಂದ ಶ್ರೀ ಬಾಲಲೀಲಾ ಮಹಾಂತ ಶಿವಯೋಗಿಗಳ ಪುರಾಣ ಪ್ರವಚನ ನಡೆಯಲಿದೆ.

ಜ.13ರಂದು ಪುರಾಣ ಮಂಗಲೋತ್ಸವ, ಶಿವದೀಕ್ಷಾ, ಜ.14ರಂದು ಮಹಾರಥೋತ್ಸವ, ಜ.15ರಂದು ಸಾಮೂಹಿಕ ವಿವಾಹ ಮತ್ತು ಕಡುಬಿನ ಕಾಳಗ ಶ್ರೀಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳ ನೇತೃತ್ವದಲ್ಲಿ ನೆರವೇರಲಿವೆ. ಸಾಮೂಹಿಕ ವಿವಾಹ, ಲಿಂಗದೀಕ್ಷೆಯಲ್ಲಿ ಪಾಲ್ಗೊಳ್ಳುವವರು ಜ.10ರೊಳಗೆ ಅಗತ್ಯ ದಾಖಲೆಯೊಂದಿಗೆ ಶ್ರೀಮಠದಲ್ಲಿ ಹೆಸರು ನೋಂದಾಯಿಸಬೇಕೆಂದು ಶ್ರೀಮಠದ ಭಕ್ತ ಕಮಿಟಿ ತಿಳಿಸಿದೆ.

### ಡಿ.27ರಂದು ಸುವರ್ಣ ವಿಧಾನ ಸೌಧದಲ್ಲಿ ಬೃಹತ್ ಗಾಂಧಿ ಪ್ರತಿಮೆ ಅನಾವರಣ: ಸಚಿವ ಎಚ್.ಕೆ.ಪಾಟೀಲ

# ವರ್ಷವಿಡೀ ಅರ್ಥಪೂರ್ಣ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಮಹಾತ್ಮ ಗಾಂಧೀಜಿಯವರು ಅಧ್ಯಕ್ಷತೆ ವಹಿಸಿದ್ದ 1924ರ ಕಾಂಗ್ರೆಸ್ ಅಧಿವೇಶನಕ್ಕೆ ನೂರು ವರ್ಷಗಳು ಪೂರ್ಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಶತಮಾನೋತ್ಸವ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸುವ ಮೂಲಕ ಮಹಾತ್ಮ ಗಾಂಧೀಜಿಯವರ ತತ್ವಾದರ್ಶಗಳನ್ನು ದೇಶದ ಪ್ರತಿಯೊಬ್ಬರಿಗೂ ಪರಿಚಯಿಸುವ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ಎಂದು ಕಾನೂನು, ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

ಬೆಳಗಾವಿ ಸುವರ್ಣಸೌಧ ಆವರಣದಲ್ಲಿ ಬುಧವಾರ ಮಹಾತ್ಮ ಗಾಂಧೀಜಿಯವರ ಪುತ್ಥಳಿ ಅನಾವರಣ ಸಮಾರಂಭದ ಪೂರ್ವಸಿದ್ಧತೆಗಳನ್ನು ಪರಿಶೀಲಿಸಿ ಅವರು ಮಾತನಾಡಿದರು.

ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ 1924ರಲ್ಲಿ ಜರುಗಿದ ಅಧಿವೇಶನ ಕೇವಲ ಪಕ್ಷದ ಅಧಿವೇಶನವಾಗಿರದೇ, ಸಾಮಾಜಿಕ ಸುಧಾರಣೆಯ ಅಸ್ತ್ರವಾಗಿತ್ತು. ಸಮಾಜದಲ್ಲಿನ ಅಸ್ಪೃಶ್ಯತೆಯನ್ನು ನಿವಾರಿಸಿ



ಭ್ರಾತೃತ್ವ ಭಾವನೆಯನ್ನು ಬೆಸೆಯುವುದರ ಮೂಲಕ ಸ್ವಾತಂತ್ರ್ಯ ಹೋರಾಟಕ್ಕೆ ಶಕ್ತಿ ತುಂಬಲಾಯಿತು ಎಂದು ತಿಳಿಸಿದರು.

1924ರಲ್ಲಿ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ಜರುಗಿದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವವನ್ನು ಆಚರಿಸುವ ಮೂಲಕ ಅಂದಿನ ಇತಿಹಾಸ ಮರುಕಳಿಸುವ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ವಿವರಿಸಿದರು.

> ಗಾಂಧೀಜಿಯವರ ತತ್ವಾದರ್ಶಗಳನ್ನು ದೇಶದ ಪ್ರತಿಯೊಬ್ಬರಿಗೂ ಪರಿಚಯಿಸುವ ಉದ್ದೇಶದೊಂದಿಗೆ ಶತಮಾನೋತ್ಸವದ ಅಂಗವಾಗಿ ರಾಜ್ಯ ಸರಕಾರ 41 ಕಾರ್ಯಕ್ರಮಗಳನ್ನು ಘೋಷಣೆ ಮಾಡಿ, ವರ್ಷಪೂರ್ತಿ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಲು ಯೋಜನೆ ರೂಪಿಸಿದೆ ಎಂದು ಸಚಿವ ಎಚ್.ಕೆ. ಪಾಟೀಲ ವಿವರಿಸಿದರು.

ಸುವರ್ಣ ಸೌಧದಲ್ಲಿನ ಮಹಾತ್ಮ ಗಾಂಧೀಜಿ ಅವರ ಬೃಹತ್ ಪ್ರತಿಮೆಯನ್ನು ಡಿ.27ರಂದು ಮುಂಜಾನೆ 10 ಗಂಟೆಗೆ ಅನಾವರಣಗೊಳಿಸಲಾಗುವದು. ಈ ಐತಿಹಾಸಿಕ ಕಾರ್ಯಕ್ರಮಕ್ಕೆ ಸರ್ವ ಪಕ್ಷದ ನಾಯಕರು, ಸ್ವಾತಂತ್ರ್ಯ ಹೋರಾಟಗಾರರನ್ನು ಆತ್ಮೀಯವಾಗಿ ಆಹ್ವಾನಿಸಲಾಗಿದೆ.

ಡಿ.26ರಂದು ನಗರದ ವೀರಸೌಧದಲ್ಲಿನ ಗಾಂಧೀಜಿಯವರ ಪ್ರತಿಮೆ ಹಾಗೂ ರಾಮತೀರ್ಥ ನಗರದಲ್ಲಿನ ಗಂಗಾಧರ್ ರಾವ್ ದೇಶಪಾಂಡೆ ಅವರ ಸ್ಮಾರಕ ಭವನ ಉದ್ಘಾಟಿಸಲಾಗುವುದು ಎಂದು ಸಚಿವರಾದ ಎಚ್.ಕೆ. ಪಾಟೀಲ ತಿಳಿಸಿದರು.

ಈ ಸಂದರ್ಭದಲ್ಲಿ ಮಾಜಿ ಮುಖ್ಯ ಮುಖ್ಯಮಂತ್ರಿ ವೀರಪ್ಪ ಮೊಯಿಲಿ, ಮಾಜಿ ಸಭಾಪತಿಗಳಾದ ಬಿ.ಎಲ್. ಶಂಕರ, ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಸೇರಿದಂತೆ, ಅಧಿಕಾರಿಗಳು, ಜನ ಪ್ರತಿನಿಧಿಗಳು ಹಾಜರಿದ್ದರು.

### ಬೆಳಗಾವಿ ಅಧಿವೇಶನ ಶತಮಾನೋತ್ಸವ । ಸಮಾವೇಶದಲ್ಲಿ ಪಾಲ್ಗೊಳ್ಳಲು ಶತಾಯುಷಿಗೆ ಜಿಲ್ಲಾಡಳಿತದಿಂದ ಆಮಂತ್ರಣ

# ಸ್ವಾತಂತ್ರ ಹೋರಾಟಗಾರ್ತಿ ಶಾಂತಾಬಾಯಿಯವರಿಗೆ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ 26-12-1924ರಂದು ಬೆಳಗಾವಿಯಲ್ಲಿ ನಡೆದ ಐತಿಹಾಸಿಕ ಎಐಸಿಸಿ ಅಧಿವೇಶನಕ್ಕೆ ಕರ್ನಾಟಕದ ಇತಿಹಾಸದಲ್ಲಿ ಒಂದು ವಿಶೇಷ ಸ್ಥಾನವಿದೆ. ಬೆಳಗಾವಿ ಅಧಿವೇಶನ ಶತಮಾನೋತ್ಸವದ ಅಂಗವಾಗಿ ಡಿಸೆಂಬರ್ 27ರಂದು ಬೆಳಗಾವಿಯಲ್ಲಿ ಕಾಂಗ್ರೆಸ್ ಪಕ್ಷ ಹಾಗೂ ಸರ್ಕಾರದ ವತಿಯಿಂದ ಬೃಹತ್ ಕಾಂಗ್ರೆಸ್ ಸಮಾವೇಶ ಹಮ್ಮಿಕೊಳ್ಳಲಾಗಿದ್ದು, ಸಮಾವೇಶದಲ್ಲಿ ಪಾಲ್ಗೊಳ್ಳಲು ಶತಾಯುಷಿ, ಸ್ವಾತಂತ್ರ್ಯ ಹೋರಾಟಗಾರ್ತಿ ಶಾಂತಾಬಾಯಿ ವರ್ಣೇಕರ್ ಅವರಿಗೆ ಜಿಲ್ಲಾಡಳಿತದಿಂದ ಬುಧವಾರ ಅಧಿಕೃತವಾಗಿ ಆಹ್ವಾನ ನೀಡಲಾಯಿತು.

ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರ ಸೂಚನೆಯಂತೆ ಸರ್ಕಾರದ ವತಿಯಿಂದ ಗದಗ ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ ಅವರು ಶಾಂತಾಬಾಯಿ ವರ್ಣೇಕರ್ ಅವರ ನಿವಾಸಕ್ಕೆ ತೆರಳಿ ಬೆಳಗಾವಿಯಲ್ಲಿ ನಡೆಯುವ ಗಾಂಧಿ ಭಾರತ ಶತಮಾನೋತ್ಸವದ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಆಹ್ವಾನ ನೀಡಿದರು. ಈ ಸಂದರ್ಭದಲ್ಲಿ ಗದಗ ಶಹರ



ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಪ್ರಭು ಬುರಬುರೆ, ಮುಖಂಡರಾದ ಅರವಿಂದ್ ಪಾಲನಕರ, ಗಂಗಾಧರ್ ನಭಾಪುರ, ಎಸ್.ಆರ್. ರೇವಣಕರ್, ಉದಯ್ ವರ್ಣೇಕರ್, ಪ್ರಕಾಶ್ ವರ್ಣೇಕರ್ ಹಾಜರಿದ್ದರು.

> ಮಹಾತ್ಮ ಗಾಂಧೀಜಿಯವರು ಉಪ್ಪಿನ ಸತ್ಯಾಗ್ರಹ ಕೈಗೊಂಡ ಸಂಧರ್ಭದಲ್ಲಿ ಅಂಕೋಲಾಕ್ಕೆ ಆಗಮಿಸಿದ್ದ ವೇಳೆ ಶಾಂತಾಬಾಯಿ ಸಬ್ಬರಾವ್ ವರ್ಣೇಕರ್ ಅವರ ಸೋದರ ಸಂಬಂಧಿಗಳಿಬ್ಬರು ಸ್ವಾತಂತ್ರ್ಯ ಹೋರಾಟದಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದರು. ಮಹಾತ್ಮ ಗಾಂಧೀಜಿಯವರು ಹಲವು ದಿನಗಳ ಕಾಲ ಅಂಕೋಲಾ ಸೇರಿದಂತೆ ಸುತ್ತ ಮುತ್ತಲಿನ ನಗರ ಪ್ರದೇಶದಲ್ಲಿ ವಾಸ್ತವ್ಯ ಮಾಡುತ್ತಿದ್ದರು. ಶಾಂತಾಬಾಯಿ ಮೂಲತಃ ಅಂಕೋಲಾ ಭಾಗದವರು. ಮಹಾತ್ಮ ಗಾಂಧಿಜಿಯವರು ಅಂಕೊಲಾಕ್ಕೆ ಉಪ್ಪಿನ ಸತ್ಯಾಗ್ರಹಕ್ಕಾಗಿ ಬಂದಾಗ ಶಾಂತಾಬಾಯಿ ಅವರು ಅಡುಗೆ ಸಿದ್ಧಪಡಿಸಿ ಅನೇಕ ದಿನಗಳ ಕಾಲ ಗಾಂಧೀಜಿಯವರಿಗೆ ಊಟದ ವ್ಯವಸ್ಥೆ ಮಾಡುತ್ತಿದ್ದರು. ಪ್ರತಿದಿನ ಆಡುಗೆ ಸಿದ್ದಪಡಿಸಿ ತಮ್ಮ ಸಹೋದರ ಕಡೆಯಿಂದ ಗಾಂಧೀಜಿಯವರಿಗೆ ಊಟದ ವ್ಯವಸ್ಥೆ ಮಾಡುತ್ತಿದ್ದರು. ಈಗ ಅವರು ಅಂಕೋಲಾದಿಂದ ಗದಗ ಭಾಗದಲ್ಲಿ ಬಂದು ನೆಲೆಸಿದ್ದಾರೆ.


### ಬೆಳಗಾವಿ ಅಧಿವೇಶನ ಶತಮಾನೋತ್ಸವ । ಡಿ.27ರಂದು ಬೆಳಗಾವಿಯಲ್ಲಿ ಬೃಹತ್ ಕಾಂಗ್ರೆಸ್ ಸಮಾವೇಶ

# ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಪಾಲ್ಗೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ 26-12-1924ರಂದು ಬೆಳಗಾವಿಯಲ್ಲಿ ನಡೆದ ಐತಿಹಾಸಿಕ ಎಐಸಿಸಿ ಅಧಿವೇಶನಕ್ಕೆ ಕರ್ನಾಟಕದ ಇತಿಹಾಸದಲ್ಲಿ ಒಂದು ವಿಶೇಷ ಸ್ಥಾನವಿದೆ. ಬೆಳಗಾವಿ ಅಧಿವೇಶನ ಶತಮಾನೋತ್ಸವದ ಅಂಗವಾಗಿ ಡಿ.27ರಂದು ಬೆಳಗಾವಿಯಲ್ಲಿ ಕಾಂಗ್ರೆಸ್ ಪಕ್ಷ ಹಾಗೂ ಸರ್ಕಾರದ ವತಿಯಿಂದ ಬೃಹತ್ ಕಾಂಗ್ರೆಸ್ ಸಮಾವೇಶ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಬೇಕು ಎಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಹಾಗೂ ಗ್ಯಾರಂಟಿ ಅನುಷ್ಠಾನ ಸಮಿತಿ ಗದಗ ತಾಲೂಕಾಧ್ಯಕ್ಷ ಅಶೋಕ ಮಂದಾಲಿ ಮನವಿ ಮಾಡಿದ್ದಾರೆ.

ಡಿಸೆಂಬರ್ 27ರಂದು ಬೆಳಗಾವಿಯ ಕ್ಲಬ್ ರಸ್ತೆಯ ಸಿ.ಪಿ.ಎಡ್ ಮೈದಾನದಲ್ಲಿ ಬೃಹತ್ ಕಾಂಗ್ರೆಸ್ ಸಮಾವೇಶ ಜರುಗಲಿದ್ದು, ಈ ಸಮಾವೇಶವನ್ನು ಅರ್ಥಪೂರ್ಣ



ಗೊಳಿಸಲು ಜಿಲ್ಲೆಯಾದ್ಯಂತ ಎಲ್ಲಾ ಕಾಂಗ್ರೆಸ್ ಕಾರ್ಯಕರ್ತರು ಭಾಗವಹಿಸಬೇಕಾದ ಅವಶ್ಯಕತೆಯಿದೆ. ಆದ್ದರಿಂದ, ಕಾಂಗ್ರೆಸ್ ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು-ಪದಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ, ಎಪಿಎಂಸಿ ಪಕ್ಷದ ಅಧ್ಯಕ್ಷರು ಹಾಗೂ ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು-ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲೀಗಲ್ ರೀಫಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗಗಳ ಅಧ್ಯಕ್ಷರು ಹಾಗೂ ಸದಸ್ಯರು, ಪಕ್ಷದ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಈ ಬೃಹತ್ ಸಮಾವೇಶದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕಾಗಿ ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಅಶೋಕ ಮಂದಾಲಿ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

### ರಾಜ್ಯ ಸರ್ಕಾರ ಪೊಲೀಸ್ ಇಲಾಖೆಯ ನೈತಿಕತೆ ಕುಸಿಯುವಂತೆ ಮಾಡಿದೆ: ಬಸವರಾಜ ಬೊಮ್ಮಾಯಿ

# ಈಗಿನದು ದೇಶ ವಿರೋಧಿ ಕಾಂಗ್ರೆಸ್

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ದೇಶದಲ್ಲಿ ಎರಡು ರೀತಿಯ ಕಾಂಗ್ರೆಸ್ ಇದ್ದು, ಸ್ವಾತಂತ್ರ್ಯ ಪೂರ್ವದಲ್ಲಿ ರಾಷ್ಟ್ರೀಯತೆಯ ಕಾಂಗ್ರೆಸ್ ಇತ್ತು. ಈಗ ಜನ ವಿರೋಧಿ, ದೇಶ ವಿರೋಧಿ ಕಾಂಗ್ರೆಸ್ ಇದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದರು.

ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, 1924ರಲ್ಲಿ ಬೆಳಗಾವಿಯಲ್ಲಿ ಮಹಾತ್ಮ ಗಾಂಧೀಜಿ ಕಾಂಗ್ರೆಸ್ ಅಧಿವೇಶನದ ಅಧ್ಯಕ್ಷತೆ ವಹಿಸಿದ ಕಾರ್ಯಕ್ರಮದ ಶತಮಾನೋತ್ಸವವನ್ನು ಕಾಂಗ್ರೆಸ್ ಮಾಡುತ್ತಿರುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿ, ಈಗಿನದು ಜನ ವಿರೋಧಿ ಮತ್ತು ದೇಶ ವಿರೋಧಿ ಕಾಂಗ್ರೆಸ್ ಸರ್ಕಾರವಾಗಿದೆ ಎಂದು ಹೇಳಿದರು.

ಈ ಸರ್ಕಾರ ಪೊಲೀಸ್ ಇಲಾಖೆಯ ನೈತಿಕತೆ ಸಂಪೂರ್ಣ ಕುಸಿಯುವಂತೆ ಮಾಡಿದೆ. ಹಿರಿಯ ಅಧಿಕಾರಿಗಳು ಕಾನ್ಸ್‌ಟೇಬಲ್ ರೀತಿ ನಡೆದುಕೊಳ್ಳುತ್ತಿದ್ದಾರೆ. ಯಾರು ನ್ಯಾಯಸಮ್ಮತವಾಗಿ ಕೆಲಸ




ಮಾಡುತ್ತಿದ್ದಾರೋ ಅವರಿಗೆ ಶಿಕ್ಷೆ ಕೊಡಲಾಗುತ್ತಿದೆ. ಪೊಲೀಸರು ಕಾನೂನಿಗೆ ನಿಷ್ಠರಾಗಿರಬೇಕು. ಕಾಂಗ್ರೆಸ್‌ನವರಿಗೆ ತಮಗೆ ನಿಷ್ಠೆ ಇರುವ ಪೊಲೀಸ್ ಅಧಿಕಾರಿಗಳು ಬೇಕಾಗಿದ್ದಾರೆ. ಹೀಗಾಗಿ ಪೊಲೀಸ್ ಇಲಾಖೆಯನ್ನು ಪಕ್ಷಗಳ ಆಧಾರದಲ್ಲಿ ವಿಭಜಿಸುತ್ತಿದ್ದು, ಯುನಿಫಾರ್ಮ್‌ನಲ್ಲಿರುವ ಪೊಲೀಸ್ ಅಧಿಕಾರಿಗಳಿಗೆ ಶಿಕ್ಷೆ ನೀಡುವುದರಿಂದ ಅವರ ನೈತಿಕತೆ ಕುಸಿಯುತ್ತಿದೆ. ತಕ್ಷಣವೇ ಈ ವ್ಯವಸ್ಥೆಯನ್ನು ಸರಿಪಡಿಸಬೇಕು ಎಂದರು.

ಬಿಜೆಪಿ ಶಾಸಕ ಮುನಿರತ್ನ ಅವರ ಮೇಲೆ ಮೊಟ್ಟೆ ಎಸೆದಿರುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್‌ನವರ ದುರಾಡಳಿತ ಮಿತಿ ಮೀರುತ್ತಿದೆ. ಕಾನೂನನ್ನು ಕೈಗೆ ತೆಗೆದುಕೊಳ್ಳಬಾರದು ಎನ್ನುವ ಕನಿಷ್ಠ ಜ್ಞಾನ ಇವರಿಗೆ ಇಲ್ಲ ಎಂದರೆ, ಇವರು 100ನೇ ವರ್ಷಾಚರಣೆ ಮಾಡಿ ಏನು ಪ್ರಯೋಜನ ಎಂದು ಪ್ರಶ್ನಿಸಿದರು.

> ಸಂವಿಧಾನ ಶಿಲ್ಪಿ ಬಾಬಾಸಾಹೇಬ್ ಅಂಬೇಡ್ಕರ್ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಹೇಳಿಕೆಯನ್ನು ಕಾಂಗ್ರೆಸ್ ವಿರೋಧಿಸುತ್ತಿರುವುದರ ಕುರಿತು ಮಾತನಾಡಿದ ಸಂಸದ ಬೊಮ್ಮಾಯಿ, ಅಂಬೇಡ್ಕರ್ ವಿಚಾರದಲ್ಲಿ ಸಂಸತ್ತಿನಲ್ಲಿ ಕಾಂಗ್ರೆಸ್ ಬಣ್ಣ ಬಯಲಾಗಿದೆ. ಹೀಗಾಗಿ ಅದನ್ನು ಮುಚ್ಚಿಕೊಳ್ಳಲು ಈ ರೀತಿಯ ನಾಟಕ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಕಲಬುರ್ಗಿಯಲ್ಲಿ ಮಹಿಳೆಗೆ ರಸ್ತೆಯಲ್ಲಿ ವಿದ್ಯುತ್ ಶಾಕ್ ಹೊಡೆದಿರುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿ, ಈ ಸರ್ಕಾರ ಕೇವಲ ವಿದ್ಯುತ್ ಶಾಕ್ ಅಷ್ಟೇ ಅಲ್ಲ, ಹಲವಾರು ಶಾಕ್‌ಗಳನ್ನು ಕೊಟ್ಟಿದೆ. ಬಾಣಂತಿಯರಿಗೆ ಕಪ್ಪು ಪಟ್ಟಿಗೆ ಸೇರಿದ ಕಂಪನಿ ಸರಬರಾಜು ಮಾಡಿರುವ ಅವಧಿ ಮೀರಿದ ಔಷಧಗಳನ್ನು ನೀಡಿ ಶಾಕ್ ಕೊಟ್ಟಿದೆ. ಇದು ಈ ಸರ್ಕಾರದಲ್ಲಿ ಸಾಮಾನ್ಯ ಜನರು ಸುರಕ್ಷಿತವಾಗಿಲ್ಲ ಎನ್ನುವುದನ್ನು ತೋರಿಸುತ್ತದೆ ಎಂದು ಹೇಳಿದರು.

## ಸಂಪಾದಕೀಯ

# ಅಸಹ್ಯ ತಂದ ರಾಜಕಾರಣ

ಬೆಳಗಾವಿಯಲ್ಲಿ ಗಾಂಧಿ ಭಾರತ ಕಾರ್ಯಕ್ರಮಕ್ಕೆ ಕ್ಷಣಗಣನೆ ಆರಂಭವಾಗಿದೆ. ಮಹಾತ್ಮ ಗಾಂಧಿ ಎಐಸಿಸಿ ಅಧ್ಯಕ್ಷರಾಗಿ ನಡೆಸಿದ ಅಧಿವೇಶನಕ್ಕೆ ಈಗ ನೂರರ ಸಂಭ್ರಮ. ಆ ಕಾರಣಕ್ಕಾಗಿ ರಾಜ್ಯ ಕಾಂಗ್ರೆಸ್ ಸರ್ಕಾರ ಗಾಂಧಿ ಭಾರತ ಹೆಸರಿನಲ್ಲಿ ಎರಡು ದಿನಗಳ ಕಾಲ ಬಹುದೊಡ್ಡ ಕಾರ್ಯಕ್ರಮವನ್ನ ಆಯೋಜಿಸಿದೆ.

ಕಾರ್ಯಕ್ರಮದ ಕುರಿತಾಗಿ ಮಾತನಾಡಿರುವ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್, ಕಾಂಗ್ರೆಸ್ ಆಯೋಜಿಸುವ ಕಾರ್ಯಕ್ರಮಗಳು ಕೇವಲ ರಾಜಕೀಯಕ್ಕೆ ಸೀಮಿತವಲ್ಲ. ಈ ದೇಶದ ಅಭಿವೃದ್ಧಿ, ಚಿಂತನೆ ನಡೆಸುವ ಕಾರ್ಯಕ್ರಮವಾಗಿದೆ ಎಂದಿದ್ದಾರೆ. ಅದರ ಜೊತೆಗೆ ಬಿಜೆಪಿ ನಾಯಕರಿಗೆ ತಿರುಗೇಟು ನೀಡಿ, ಗಾಂಧಿ ಭಾರತ ಕಾರ್ಯಕ್ರಮ ತಡೆಯಲು ಯತ್ನಿಸಿದರೆ ನಮ್ಮ ಶಕ್ತಿ ತೋರಿಸಬೇಕಾಗುತ್ತದೆ ಎಂದೂ ಉಲ್ಲೇಖಿಸಿದ್ದಾರೆ.

ಅಹಿಂಸೆಯನ್ನೆ ಅಸ್ತ್ರವನ್ನಾಗಿಸಿಕೊಂಡ ಮಹಾತ್ಮ ಗಾಂಧಿ ಸ್ಮರಣೆಯ ಕಾರ್ಯಕ್ರಮದ ಸಂದರ್ಭದಲ್ಲಿ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆಡಿದ ಮಾತುಗಳು ಆ ಕಾರ್ಯಕ್ರಮಕ್ಕೆ ಶೋಭೆ ತರುವುದಿಲ್ಲ. ಅಹಿಂಸೆ, ಶಾಂತಿ ಬೋಧಿಸಿದ ಮಹಾತ್ಮ ಗಾಂಧಿ ಆದರ್ಶಗಳನ್ನ ಪಾಲಿಸುವ ಕಾಂಗ್ರೆಸ್ ಪಕ್ಷದ ನಾಯಕರೇ ಈ ಹೇಳಿಕೆ ಹಿಂಸೆಯನ್ನ ಪ್ರಚೋದಿಸುವಂತಿದೆ.

ಇದೇ ಸಂದರ್ಭದಲ್ಲಿ ಶಾಸಕ ಮುನಿರತ್ನ ಮೇಲೆ ಮೊಟ್ಟೆ ದಾಳಿ ನಡೆದಿದೆ. ಶಾಸಕರ ಮೇಲೆ ದಾಳಿ ಮಾಡಿದ ಕಾಂಗ್ರೆಸ್ ಕಾರ್ಯಕರ್ತನನ್ನ ಪೊಲೀಸರು ಬಂಧಿಸಿದ್ದಾರೆ. ದಾಳಿ ಮಾಡಿದ ಕಾರ್ಯಕರ್ತ ಹಿಂಸೆಯ ಹಾದಿ ಹಿಡಿದಿರುವುದು ಸ್ಪಷ್ಟವಾಗುತ್ತದೆ.

ಇನ್ನು ಲಕ್ಷ್ಮಿ ಹೆಬ್ಬಾಳ್ಕರ್ ಮತ್ತು ಸಿ.ಟಿ. ರವಿ ಪ್ರಕರಣ ಇಡೀ ರಾಜ್ಯದ ಮಾನ ಹರಾಜು ಆಗುವಂತೆ ಮಾಡಿದೆ. ದೊಡ್ಡ ದೊಡ್ಡ ನಾಯಕರು ಆಕ್ಷೇಪಾರ್ಹ ಶಬ್ದ ಬಳಕೆ ಮಾಡಿ, ರಾಜಕೀಯ ಕೆಸರೆರಚಾಟ ನಡೆಸುತ್ತಿದ್ದರೆ, ಕಾರ್ಯಕರ್ತರು ಅದನ್ನ ಹಿಂಸೆಯ ರೂಪದಲ್ಲಿ ಪ್ರದರ್ಶಿಸುತ್ತಿದ್ದಾರೆ.

ರಾಜಕಾರಣ ಎಂದರೆ ಈಗಾಗಲೇ ಜನ ಅಸಹ್ಯ ಪಟ್ಟುಕೊಳ್ಳುವಂತಾಗಿದೆ. ಗಾಂಧಿ ಭಾರತ ಕಾರ್ಯಕ್ರಮ, ಶತಮಾನದ ನಂತರದ ಶುದ್ಧ ರಾಜಕಾರಣವನ್ನ ಬಿತ್ತುವ ಕಾರ್ಯಕ್ರಮ ಆಗಲಿ. ಕನಿಷ್ಠ ಪಕ್ಷ ಮಹಾತ್ಮ ಗಾಂಧಿಯನ್ನು ಸ್ಮರಣೆ ಮಾಡುವ ಪಕ್ಷದ ಕಾರ್ಯಕರ್ತರು, ಮುಖಂಡರು ಗಾಂಧಿ ಆದರ್ಶಗಳನ್ನ ಪಾಲಿಸುವಂತಾಗಲಿ.

## ಲಿಂ.ಶ್ರೀ ಕೇದಾರ ಶಾಂತಲಿಂಗ ಜಗದ್ಗುರುಗಳ ಮೂರ್ತಿ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ರಂಭಾಪುರಿ ಶ್ರೀಗಳು

# ಧರ್ಮಾಚರಣೆಯಿಂದ ಬದುಕು ವಿಕಾಸ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ



ಜೀವನದ ಉನ್ನತಿಗೆ ಮತ್ತು ಶಾಂತಿಯ ಬದುಕಿಗೆ ಧರ್ಮದ ಆದರ್ಶ ಮೌಲ್ಯಗಳ ಅರಿವು, ಆಚರಣೆ ಮುಖ್ಯ. ಸುಖದ ಮೂಲ ಧರ್ಮದ ಪರಿಪಾಲನೆಯಲ್ಲಿದೆ. ಸತ್ಯ ಶುದ್ಧ ಧರ್ಮಾಚರಣೆಯಿಂದ ಬದುಕು ವಿಕಾಸಗೊಳ್ಳುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ತಾಲೂಕಿನ ಮುತ್ನಾಳ ಹಿರೇಮಠದಲ್ಲಿ ಲಿಂ.ಶ್ರೀ ಕೇದಾರ ಶಾಂತಲಿಂಗ ಜಗದ್ಗುರುಗಳ ಮೂರ್ತಿ ಪ್ರತಿಷ್ಠಾಪನೆ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಅಶಾಂತಿಯಿಂದ ತತ್ತರಿಸುತ್ತಿರುವ ಜೀವ ಜಗತ್ತಿಗೆ ಧರ್ಮವೊಂದೇ ಆಶಾಕಿರಣ. ಸಕಲ ಜೀವಾತ್ಮರಿಗೆ ಒಳಿತನ್ನೇ ಬಯಸಿದ ವೀರಶೈವ ಧರ್ಮದಲ್ಲಿ ಆದರ್ಶ ಮೌಲ್ಯಗಳನ್ನು ಕಾಣುತ್ತೇವೆ. ಅವರವರ ಧರ್ಮ ಅವರಿಗೆ ಶ್ರೇಷ್ಠ. ಆದರೆ ಇನ್ನೊಂದು ಧರ್ಮದವರೊಂದಿಗೆ ಸಹಿಷ್ಣುತಾ ಮನೋಭಾವನೆಯಿಂದ ನಡೆದು ಸಮಾಜದ ಸ್ವಾಸ್ಥ್ಯವನ್ನು ಕಾಪಾಡಬೇಕಾದುದು ಎಲ್ಲರ ಧರ್ಮ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಅಹಿಂಸಾಧಿ ಧ್ಯಾನ ಪರ್ಯಂತರವಾದ ದಶ ಧರ್ಮ ಸೂತ್ರಗಳು ಸಕಲರ ಬಾಳಿಗೆ ಬೆಳಕು ತೋರಿವೆ.

ಲಿಂ.ಶ್ರೀ ಕೇದಾರ ಶಾಂತಲಿಂಗ ಜಗದ್ಗುರುಗಳು ಸರಳತೆಯ ಸಾಕಾರ ಮೂರ್ತಿಗಳಾಗಿ 14 ವರುಷಗಳವರೆಗೆ ಕೇದಾರ ಪೀಠವನ್ನು ಆರೋಹಣ ಮಾಡಿ ಭಕ್ತ ಸಂಕುಲಕ್ಕೆ ಒಳಿತನ್ನು ಬಯಸಿದ್ದನ್ನು ಯಾರೂ ಮರೆಯಲಾಗದು. ಅಂಥ ಪರಮ ಪೂಜ್ಯರ ಜನ್ಮ ಭೂಮಿ ಮುತ್ನಾಳ ಹಿರೇಮಠದಲ್ಲಿ ಅವರ ಮಂಗಲಮಯ ಶಿಲಾ ಮೂರ್ತಿಯನ್ನು ಗದ್ದಿಗೆಯ ಮೇಲೆ ಪ್ರತಿಷ್ಠಾಪಿಸಿರುವುದು ತಮಗೆ ಅತ್ಯಂತ ಸಂತೋಷ ತಂದಿದೆ ಎಂದ ಅವರು ಗ್ರಾಮದಲ್ಲಿ ಬಹು ಸಂಖ್ಯಾತರಾಗಿರುವ ಜೈನ ಸಮಾಜ ಬಾಂಧವರು ಸಹಕರಿಸಿ ಕಾರ್ಯಕ್ರಮ ಯಶಸ್ವಿಗಾಗಿ ಶ್ರಮಿಸಿದ್ದು ಅವರಲ್ಲಿರುವ ಧರ್ಮ ನಿಷ್ಠೆಗೆ ಸಾಕ್ಷಿಯಾಗಿದೆ ಎಂದರು.

> ಬೆಳಗಾವಿ ಸಂಸದ, ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್ ಮಾತನಾಡಿ, ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕೆ ಧರ್ಮ ಬಹಳ ಮುಖ್ಯ. ಅರಿವು ಆದರ್ಶಗಳನ್ನು ಬೆಳೆಸುವ ಗುರುವಿನ ಜವಾಬ್ದಾರಿ ಮಹತ್ವವಾದದ್ದು. ಲಿಂ.ಶ್ರೀ ಕೇದಾರ ಶಾಂತಲಿಂಗ ಜಗದ್ಗುರುಗಳ ಜನ್ಮ ಭೂಮಿ ಮುತ್ನಾಳದಲ್ಲಿ ಬಹು ದೊಡ್ಡ ಕಾರ್ಯಕ್ರಮ ಸಂಯೋಜಿಸಿರುವುದು ಹೆಮ್ಮೆಯ ಸಂಗತಿ. ಲಿಂ. ಸುರೇಶ ಅಂಗಡಿಯವರು ಕೈಗೊಂಡ ಜಿಲ್ಲೆಯ ಅಭಿವೃದ್ಧಿ ಕಾರ್ಯಗಳನ್ನು ತಾವು ಮುಂದುವರಿಸಿ ಪೂರ್ಣಗೊಳಿಸಲಾಗುವುದೆಂದು ಭರವಸೆಯಿತ್ತರು.


ಸಾನ್ನಿಧ್ಯ ವಹಿಸಿದ ಶ್ರೀ ಕೇದಾರ ಭೀಮಾಶಂಕರ ಜಗದ್ಗುರುಗಳು ತಮ್ಮ ಆಶೀರ್ವಚನದಲ್ಲಿ, ಪ್ರತಿಯೊಬ್ಬ ಮನುಷ್ಯ ಜೀವನದಲ್ಲಿ ಹೆತ್ತ ತಂದೆ-ತಾಯಿಗಳ ಋಣ ಮತ್ತು ಗುರು ಋಣ ತೀರಿಸಬೇಕು. ಮುತ್ನಾಳ ಗ್ರಾಮ ಚಿಕ್ಕದಾದರೂ ಭಕ್ತರ ಭಕ್ತಿ ದೊಡ್ಡದು. ಲಿಂ.ಶ್ರೀ ಕೇದಾರ ಶಾಂತಲಿಂಗ ಜಗದ್ಗುರುಗಳನ್ನಾಗಿ ಮಾಡಿದ ಕೀರ್ತಿ ಲಿಂ. ಶ್ರೀಮದ್ ರಂಭಾಪುರಿ ವೀರಗಂಗಾಧರ ಜಗದ್ಗುರುಗಳಿಗೆ ಸಲ್ಲುತ್ತದೆ. ಇಂದು ಅವರ ಮೂರ್ತಿ ಪ್ರತಿಷ್ಠಾಪನಾ ಸಂದರ್ಭದಲ್ಲಿ ಇಂದಿನ ಶ್ರೀ ರಂಭಾಪುರಿ ಜಗದ್ಗುರುಗಳು ಆಗಮಿಸಿರುವುದು ಉಭಯ ಪೀಠಗಳ ಬಾಂಧವ್ಯಕ್ಕೆ ಸಾಕ್ಷಿಯಾಗಿದೆ ಎಂದರು.

ಮುತ್ನಾಳ ಹಿರೇಮಠದ ಶಿವಾನಂದ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ನಮ್ಮ ಬಹು ದಿನಗಳ ಕನಸು ನನಸಾಗಿದೆ. ಉಭಯ ಜಗದ್ಗುರುಗಳು ಆಗಮಿಸಿ ಮೂರ್ತಿ ಪ್ರತಿಷ್ಠಾಪನೆ ನೆರವೇರಿಸಿದ್ದು ಈ ಭಾಗದ ಭಕ್ತರ ಸೌಭಾಗ್ಯ ಎಂದರು.

ಸುಳ್ಳ ಶಿವಸಿದ್ಧರಾಮೇಶ್ವರ ಶ್ರೀಗಳು, ಶಿರಕೋಳ ಗುರುಸಿದ್ಧೇಶ್ವರ ಶ್ರೀಗಳು, ಹುಕ್ಕೇರಿ ಚಂದ್ರಶೇಖರ ಶ್ರೀಗಳು, ಸಂಗೊಳ್ಳಿ ಗುರುಲಿಂಗ ಶ್ರೀಗಳು, ಕಣ್ವಕುಪ್ಪಿ ನಾಲ್ವಡಿ ಶಾಂತಲಿಂಗ ಶ್ರೀಗಳು, ಕಾರಂಜಾ ಗುರುಸಿದ್ಧ ಶ್ರೀಗಳು, ಅರಳಿಕಟ್ಟಿ ವಿರಕ್ತಮಠದ ಶ್ರೀಗಳು, ಗುರುಗುಂಟಾ ಮಠದ ಶ್ರೀಗಳು, ಮಾಜಿ ವಿಧಾನ ಪರಿಷತ್ ಸದಸ್ಯ ಮಹಂತೇಶ ಕವಟಗಿಮಠ ಉಪಸ್ಥಿತರಿದ್ದು ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಪಡೆದರು.

# ದೊಡ್ಡಾಟ ಪ್ರದರ್ಶನ ನಿರಂತರವಾಗಿರಲಿ

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ



ಹುಯಿಲಗೋಳ ರಸ್ತೆಯ ಗೌರಿಗುಡಿ ಓಣಿಯಲ್ಲಿ ಶ್ರೀದೇವಿ ಮಹಾತ್ಮೆ ಅರ್ಥಾತ್ ಮಹಿಷಾಸುರ ಮರ್ಧಿನಿ ಎಂಬ ದೊಡ್ಡಾಟವು ಯಶಸ್ವಿಯಾಗಿದ್ದಕ್ಕೆ ಸಮಾಜದ ಅಧ್ಯಕ್ಷರಾದ ಕಾಶಣ್ಣ ವೀರಪ್ಪ ಕುಂದಗೋಳ ಎಲ್ಲಾ ಪಾತ್ರಧಾರಿಗಳಿಗೆ, ಸೂತ್ರಧಾರರಿಗೆ, ಹಿಮ್ಮೇಳ ವಾದಕರಿಗೆ ಮತ್ತು ವ್ಯವಸ್ಥಾಪಕರಿಗೆ ಉಪಹಾರ ಔತಣಕೂಟ ಏರ್ಪಡಿಸಿದ್ದರು.

ಈ ಸಂದರ್ಭದಲ್ಲಿ ಸಮಾಜದ ಉಪಾಧ್ಯಕ್ಷ ಶರಣಬಸಪ್ಪ (ರಾಜು) ಗುಡಿಮನಿ ಮಾತನಾಡಿ, ಈ ದೊಡ್ಡಾಟ ಕಾರ್ಯಕ್ರಮವು ಯಶಸ್ವಿಯಾಗುವದಕ್ಕೆ ಹಿರಿಯರಾದ ಮತ್ತು ಅಧ್ಯಕ್ಷರಾದ ಕಾಶಣ್ಣ ಕುಂದಗೋಳರು, ಸೂತ್ರಧಾರ ಅಶೋಕ ಸುತಾರ ಮತ್ತು ಎಲ್ಲಾ ಪಾತ್ರಧಾರಿಗಳು ಕಾರಣ. ಗೌರಿಗುಡಿ ಓಣಿಯಲ್ಲಿ ಈ ಹಿಂದೆಯೂ ದೊಡ್ಡಾಟ ನಡೆದಿದ್ದು, ಮುಂದೆಯೂ ಇದೇ ರೀತಿಯ ಕಾರ್ಯಕ್ರಮ ನಡೆಯಲಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕಾಶಣ್ಣ ಕುಂದಗೋಳ ದಂಪತಿಗಳನ್ನು ಸನ್ಮಾನಿಸಲಾಯಿತು. ದೊಡ್ಡಾಟದ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನೆರವೇರಿಸಲು ಕಾರಣರಾದ ಸುಭಾಷ್ ಮಳಗಿಯವರಿಗೆ ಸಮಾಜದ ಪರವಾಗಿ ರಾಜು ಗುಡಿಮನಿ ಅಭಿನಂದನೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಸಮಾಜದ ಹಿರಿಯರಾದ ಶಿವಪುತ್ರಪ್ಪ ಬೆಂತೂರ, ಬಸಪ್ಪ ಮಾಳಶೆಟ್ಟಿ, ಬಸವರಾಜ ಕುಂದಗೋಳ, ಸುಭಾಷ್ ಮಳಗಿ, ಸತೀಶ ಕುಂದಗೋಳ, ಗವಿಯಪ್ಪ ಮಾದನೂರ, ಹನುಮಾನಸಿಂಗ್ ಬ್ಯಾಳಿ, ಅರುಣ ರಾಯಬಾಗಿ, ಅಜಯ ಕುಂದಗೋಳ, ಸಿದ್ಧಲಿಂಗೇಶ್ವರ ಕುಂದಗೋಳ ಶಿಕ್ಷಕಿ ಮಂಜುಳಾ ರಜಪೂತ, ಕೆ.ಬಿ. ಮಾರನಬಸರಿ, ದೊಡ್ಡಾಟದಲ್ಲಿ ಬಾಲನರ್ತಕಿಯರಾದ ಶ್ರಾವಣಿ, ಸಂಜನಾ, ಲತಾ, ಮಹಾಲಕ್ಷ್ಮೀ, ತನುಶ್ರೀ ಮತ್ತು ಭಾವನಾ ಉಪಸ್ಥಿತರಿದ್ದರು.

ಸಿದ್ಧಲಿಂಗೇಶ್ವರ ಎಮ್.ಮುಳ್ಳಾಳ ಕಾರ್ಯಕ್ರಮ ನಿರೂಪಿಸಿದರೆ, ಪ್ರಕಾಶ ಎಸ್.ಮ್ಯಾಗೇರಿ ವಂದಿಸಿದರು.

## ಲಿಫ್ಟ್ ನೀಡುವುದಾಗಿ ನಂಬಿಸಿ 11 ಜನರನ್ನು ಕೊಂದ ಸರಣಿ ಹಂತಕ; ಶವದ ಮೇಲೆ 'ಧೋಕೆಬಾಜ್' ಎಂದು ಬರೆದಿದ್ದ ಕೊಲೆಗಾರ



■ವಿಜಯಸಾಕ್ಷಿ ಸುದ್ದಿ, ಪಂಜಾಬ್

ಪಂಜಾಬ್‌ನಲ್ಲಿ ಭಾರಿ ಸಂಚಲನ ಸೃಷ್ಟಿಸಿದ್ದ ಸರಣಿ ಹಂತಕನನ್ನು ಪೊಲೀಸರು ಬಂಧಿಸಿದ್ದಾರೆ. ಈತ 18 ತಿಂಗಳ ಅವಧಿಯಲ್ಲಿ 11 ಜನರನ್ನು ಹತ್ಯೆಗೈದಿದ್ದು, ಶವವೊಂದರ ಮೇಲೆ 'ಧೋಕೆಬಾಜ್' (ಮೋಸಗಾರ) ಎಂದು ಬರೆದಿದ್ದ ಎಂದು ತಿಳಿದುಬಂದಿದೆ.

ಲಿಫ್ಟ್ ನೀಡುವುದಾಗಿ ಹೇಳಿ ಕಾರು ಹತ್ತಿಸಿಕೊಳ್ಳುತ್ತಿದ್ದ ಈತ, ನಂತರ ದರೋಡೆ ಮಾಡುತ್ತಿದ್ದ. ಮಂಗಳವಾರ ರೂಪನಗರ ಜಿಲ್ಲೆಯಿಂದ ಕೊಲೆಗಾರನ್ನು ಬಂಧಿಸಲಾಗಿದೆ. ಆರೋಪಿಯನ್ನು 33 ವರ್ಷದ ರಾಮ್ ಸರೂಪ್ ಎಂದು ಗುರುತಿಸಲಾಗಿದ್ದು, ಆತ ಹೋಶಿಯಾರ್‌ಪುರದ ಗರ್ಶಂಕರ್‌ನ ಚೌರಾ ಗ್ರಾಮದ ನಿವಾಸಿಯಾಗಿದ್ದಾನೆ.

ಪೊಲೀಸರ ಪ್ರಕಾರ, ಬಲಿಪಶುಗಳೆಲ್ಲರೂ ಪುರುಷರಾಗಿದ್ದು, ಮುಖ್ಯವಾಗಿ ಅವರಿಗೆ ಲಿಫ್ಟ್ ನೀಡಿದ ನಂತರ ಲೈಂಗಿಕ ಕ್ರಿಯೆಯಲ್ಲಿ ತೊಡಗಿದ್ದ ಎನ್ನಲಾಗಿದೆ. ಆರೋಪಿಯು ನಂತರ ಕೊಲೆ ಮಾಡಿದ ವ್ಯಕ್ತಿಗಳನ್ನು ದರೋಡೆ ಮಾಡಿ, ಸಂತ್ರಸ್ತರು ಹಣ ನೀಡಲು ನಿರಾಕರಿಸಿದ ನಂತರ ಅವರನ್ನು ಕೊಲ್ಲುತ್ತಿದ್ದ. ಹೆಚ್ಚಿನ ಪ್ರಕರಣಗಳಲ್ಲಿ ಆರೋಪಿಯು ತನ್ನ ಬಲಿಪಶುಗಳನ್ನು ತುಂಡು ಬಟ್ಟೆಯಿಂದ ಕತ್ತು ಹಿಸುಕಿದರೆ, ಇತರ ಪ್ರಕರಣಗಳಲ್ಲಿ ತಲೆಗೆ ಗಾಯಗಳಾಗಿ ಸಾವನ್ನಪ್ಪಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಒಂದು ಕೊಲೆಯಲ್ಲಿ, ಆರೋಪಿಯು ಬಲಿಪಶುವಿನ ಬೆನ್ನಿನ ಮೇಲೆ 'ಧೋಕೆಬಾಜ್' (ವಂಚಕ) ಎಂದು ಬರೆದಿದ್ದಾನೆ. ಮೃತ ವ್ಯಕ್ತಿ ಖಾಸಗಿ ಕಾರ್ಖಾನೆಯಲ್ಲಿ ಭದ್ರತಾ ಸಿಬ್ಬಂದಿಯಾಗಿ ಕೆಲಸ ಮಾಡುತ್ತಿದ್ದ ಮಾಜಿ ಸೈನಿಕರಾಗಿದ್ದರು.

ಆಗಸ್ಟ್ 18 ರಂದು ಟೋಲ್ ಪ್ಲಾಜಾ ಮೋದ್ರಾದಲ್ಲಿ ಚಹಾ ಮತ್ತು ನೀರು ಬಡಿಸುತ್ತಿದ್ದ 37 ವರ್ಷದ ವ್ಯಕ್ತಿಯ ಕೊಲೆಗೆ ಸಂಬಂಧಿಸಿದಂತೆ ಆರೋಪಿಯನ್ನು ಆರಂಭದಲ್ಲಿ ಬಂಧಿಸಲಾಯಿತು. ವಿಚಾರಣೆ ವೇಳೆ ಸರೂಪ್ ಅವರು ಇನ್ನೂ 10 ಜನರನ್ನು ಕೊಂದಿದ್ದಾರೆ ಎಂದು ಬಹಿರಂಗಪಡಿಸಿದ್ದಾನೆ. ಈ ಪೈಕಿ ಐದು ಪ್ರಕರಣಗಳು ಈವರೆಗೆ ದೃಢಪಟ್ಟಿದ್ದು, ಉಳಿದ ಕೊಲೆಗಳ ಪತ್ತೆಗೆ ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಏಪ್ರಿಲ್ 5 ರಂದು 34 ವರ್ಷದ ಟ್ರ್ಯಾಕ್ಟರ್ ರಿಪೇರಿ ಮಾಡುವವರ ಕೊಲೆ ಮತ್ತು ಜನವರಿ 24 ರಂದು ಕಾರಿನಲ್ಲಿ ಪತ್ತೆಯಾದ ಯುವಕನನ್ನು ಹತ್ಯೆ ಮಾಡಿದ ಪ್ರಕರಣಗಳು ಸೇರಿವೆ. ಹೋಶಿಯಾರ್ಪುರ್ ಮತ್ತು ಫತೇಗಢ್ ಜಿಲ್ಲೆಗಳಲ್ಲಿ ಕೃತ್ಯ ನಡೆದಿವೆ. ಕೂಲಿ ಕೆಲಸ ಮಾಡುತ್ತಿದ್ದ ಆರೋಪಿ ಮಾದಕ ವ್ಯಸನಿಯಾಗಿದ್ದ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸರಣಿ ಹಂತಕನ ಪ್ರಕಾರ, ಅವನು ಮೃತರ ಪಾದಗಳನ್ನು ಸ್ಪರ್ಶಿಸುತ್ತಿದ್ದನು ಮತ್ತು ಅವರನ್ನು ಕೊಂದ ನಂತರ ಪಶ್ಚಾತ್ತಾಪ ಪಡುತ್ತಿದ್ದನು. ನಶೆ ಏರಿದ ನಂತರವೇ ಅಪರಾಧಗಳನ್ನು ಎಸಗಿರುವುದಾಗಿ ಒಪ್ಪಿಕೊಂಡಿರುವ ಆತ, ಇನ್ನು ಮುಂದೆ ಅವುಗಳನ್ನು ನೆನಪಿಸಿಕೊಳ್ಳುವುದಿಲ್ಲ ಎಂದು ಹೇಳಿದ್ದಾನೆ.

ಆರೋಪಿಯು ಮೂರು ಮದುವೆಯಾಗಿದ್ದನೆಂದು ವರದಿಯಾಗಿದೆ. ಆದರೆ, ಆತನ ಸಲಿಂಗಿಯಾಗಿದ್ದ ಕಾರಣ ಎರಡು ವರ್ಷಗಳ ಹಿಂದೆ ಆತನ ತನ್ನ ಮನೆ ತೊರೆದಿದ್ದ.

"ನಾವು ಆರೋಪಿಯನ್ನು ಬಂಧಿಸಿದ್ದೇವೆ. ಶೀಘ್ರದಲ್ಲೇ ನ್ಯಾಯಾಲಯಕ್ಕೆ ಹಾಜರುಪಡಿಸಲಾಗುವುದು" ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಗಾಝಾದಲ್ಲಿ ನರಮೇಧ : ಯೇಸುಕ್ರಿಸ್ತನ ಜನ್ಮಸ್ಥಳದಲ್ಲಿ ಸತತ ಎರಡನೇ ವರ್ಷವೂ ಕಳೆಗುಂದಿದ ಕ್ರಿಸ್‌ಮಸ್




■ವಿಜಯಸಾಕ್ಷಿ ಸುದ್ದಿ, ಗಾಝಾ

ಗಾಝಾದಲ್ಲಿ ಇಸ್ರೇಲ್ ನರಮೇಧ ನಡೆಸುತ್ತಿರುವ ಹಿನ್ನೆಲೆ ಸತತ ಎರಡನೇ ವರ್ಷವೂ ಏಸು ಕ್ರಿಸ್ತನ ಜನ್ಮ ಸ್ಥಳ ಜೆರುಸಲೇಂನ ಬೆಥ್ಲೆಹೆಮ್‌ನಲ್ಲಿ ಜನರು ಸಂಭ್ರವಿಲ್ಲದ ಸರಳ ಕ್ರಿಸ್‌ಮಸ್ ಆಚರಿಸಿದರು.

ಕ್ರಿಸ್‌ಮಸ್ ಮುನ್ನಾದಿನ ಸಂಜೆ (ಕ್ರಿಸ್‌ಮಸ್ ಈವ್) ಬೆಥ್ಲೆಹೆಮ್‌ನ ಐತಿಹಾಸಿಕ ಬೀದಿಗಳಲ್ಲಿ ವಿಶೇಷ ವಸ್ತ್ರ ಧರಿಸಿ ಮೆರವಣಿಗೆ ನಡೆಸಿದ 'ಟೆರ್ರಾ ಸ್ಯಾಂಕ್ಟಾ ಸ್ಕೌಟ್ ಟ್ರೂಪ್' ತಂಡದ ಪುಟಾಣಿ ಮಕ್ಕಳು 'ನಮಗೆ ಸಾವು ಬೇಡ, ಜೀವನ ಬೇಕು. ಗಾಝಾದಲ್ಲಿ ನರಮೇಧ ನಿಲ್ಲಿಸಿ' ಎಂಬ ಆಗ್ರಹ ವ್ಯಕ್ತಪಡಿಸಿದರು.

ಸತತ ಎರಡನೇ ವರ್ಷ ಈ ಬಾರಿಯೂ ಬೆತ್ಲಹೆಮ್‌ನ ಕ್ರಿಸ್‌ಮಸ್ ಸಂಭ್ರಮದ ಮೇಲೆ ಯುದ್ದದ ಕಾರ್ಮೋಡ ಕವಿದಿತ್ತು. ಕಳೆದ ವರ್ಷವೂ ಬೆಥ್ಲೆಹೆಮ್‌ನಲ್ಲಿ ಅದ್ದೂರಿ ಕ್ರಿಸ್‌ಮಸ್ ಆಚರಣೆಯನ್ನು ರದ್ದುಗೊಳಿಸಲಾಗಿತ್ತು.

ಒಂದು ದೊಡ್ಡ ಕ್ರಿಸ್ಮಸ್ ಗಿಡವನ್ನು ಬೆಥ್ಲೆಹೆಮ್‌ನ ಚರ್ಚ್ ಬಳಿಯ (ಚರ್ಚ್ ಆಫ್ ನೇಟಿವಿಟಿ) ಐತಿಹಾಸಿಕ ಮ್ಯಾಂಗರ್ ಸ್ಕ್ವೇರ್ ಗುಹೆಯೊಂದರ ಮೇಲೆ ಪ್ರತಿವರ್ಷ ಕ್ರಿಸ್‌ಮಸ್ ವೇಳೆ ನಿಲ್ಲಿಸಲಾಗುತ್ತದೆ. ಈ ಜಾಗದಲ್ಲಿ ಏಸು ಕ್ರಿಸ್ತ 2,000 ವರ್ಷಗಳ ಹಿಂದೆ ಜನಿಸಿದರು ಎಂದು ಕ್ರಿಶ್ಚಿಯನ್ನರು ನಂಬುತ್ತಾರೆ. ಆದರೆ, ಕಳೆದ ಎರಡು ವರ್ಷಗಳಿಂದ ಇಲ್ಲಿ ಸಂಭ್ರಮಕ್ಕೆ ಕಂಡಿಲ್ಲ.

ಕಳೆದ ವರ್ಷದಂತೆ ಈ ವರ್ಷವೂ ಬೆಥ್ಲೆಹೆಮ್ ಮುನ್ಸಿಪಾಲಿಟಿ ಗಾಝಾದಲ್ಲಿ ನರಮೇಧ ನಡೆಯುತ್ತಿರುವ ಹಿನ್ನೆಲೆ ಸರಳ ಕ್ರಿಸ್‌ಮಸ್ ಆಚರಣೆಯ ನಿರ್ಧಾರ ಕೈಗೊಂಡಿದೆ. ಇಸ್ರೇಲ್‌ನಲ್ಲಿರುವ ಸುಮಾರು 185, 000 ಮತ್ತು ಪ್ಯಾಲೆಸ್ತೀನ್ ಭೂ ಪ್ರದೇಶದ ವ್ಯಾಪ್ತಿಯಲ್ಲಿರುವ ಸುಮಾರು 47, 000 ಕ್ರಿಶ್ಚಿಯನ್ನರು ಶಾಂತಿಯುತ ಮತ್ತು ನೆಮ್ಮದಿಯ ಭವಿಷ್ಯಕ್ಕಾಗಿ ಪ್ರಾರ್ಥಿಸಿದ್ದಾರೆ.

ಈ ದುಃಖವನ್ನು ಕೊನೆಗೊಳಿಸಿ, ಶಾಂತಿಯ ವಾತಾವರಣ ನೀಡುವಂತೆ ನಾವು ಏಸುಕ್ರಿಸ್ತನಲ್ಲಿ ಪ್ರಾರ್ಥಿಸುತ್ತೇವೆ ಎಂದು ಆಂಟನ್ ಸಲ್ಮಾನ್ ಹೇಳಿದ್ದಾರೆ.

ಕಳೆದ ಭಾನುವಾರ ಗಾಝಾದಲ್ಲಿ ಸಾಮೂಹಿಕ ಪ್ರಾರ್ಥನೆಯ ನೇತೃತ್ವ ವಹಿಸಿದ್ದ ಜೆರುಸಲೆಮ್‌ನ ಆರ್ಚ್‌ಬಿಷಪ್ ಪಿಯರ್‌ಬಟ್ಟಿಸ್ಟಾ ಪಿಜ್ಜಾಬಲ್ಲಾ ಅವರು ಕ್ರಿಸ್‌ಮಸ್ ಈವ್ ದಿನ ಬೆಥ್ಲೆಹೆಮ್‌ನಲ್ಲಿ ಪ್ರಾರ್ಥನೆಗೆ ನೇತೃತ್ವ ನೀಡುವಾಗಲೂ ಶಾಂತಿಗಾಗಿ ಪ್ರಾರ್ಥಿಸುತ್ತೇವೆ ಎಂದಿದ್ದಾರೆ.

"ನಾನು ನಿನ್ನೆಯಷ್ಟೇ ಗಾಝಾದಿಂದ ಬಂದೆ. ಅಲ್ಲಿ ಎಲ್ಲವನ್ನೂ ನಾಶಮಾಡಲಾಗಿದೆ. ಅಲ್ಲಿನ ಶೋಚನೀಯ ಸ್ಥಿತಿಯನ್ನು ನಾನು ಕಣ್ಣಾರೆ ನೋಡಿದೆ. ಆದರೆ, ಗಾಝಾದ ಜನತೆ ಬಿಟ್ಟುಕೊಡುವವರಲ್ಲ. ಅವರು ಆತ್ಮವಿಶ್ವಾಸದಲ್ಲಿದ್ದಾರೆ ಎಂದು ಪಿಯರ್‌ಬಟ್ಟಿಸ್ಟಾ ಅವರು ಬೇಸರದ ಮಾತುಗಳನ್ನು ಆಡಿದ್ದಾರೆ.

ಬೆಥ್ಲೆಹೆಮ್‌ನ ಚರ್ಚ್ ಆಫ್ ನೇಟಿವಿಟಿ ಬಳಿ ಕ್ರಿಸ್‌ಮಸ್ ಈವ್ ದಿನ ಪ್ಯಾಲೆಸ್ತೀನ್ ಜನತೆ ಕೂಡ ವಿಶೇಷ ಮೌನ ಮೆರವಣಿಗೆ ನಡೆಸಿದ್ದಾರೆ. ಈ ಮೂಲಕ ಗಾಝಾದ ನರಮೇಧವನ್ನು ಖಂಡಿಸಿದ್ದಾರೆ.

## ಸಂಭಾಲ್ ಹಿಂಸಾಚಾರ ಪ್ರಕರಣ: ಮತ್ತೆ 7 ಆರೋಪಿಗಳನ್ನು ಬಂಧಿಸಿದ ಪೊಲೀಸರು

■ವಿಜಯಸಾಕ್ಷಿ ಸುದ್ದಿ, ಸಂಭಾಲ್



ಮಸೀದಿ ಸಮೀಕ್ಷೆ ವೇಳೆ ಸಂಭಾಲ್‌ನಲ್ಲಿ ನಡೆದ ಹಿಂಸಾಚಾರದಲ್ಲಿ ಉತ್ತರ ಪ್ರದೇಶ ಪೊಲೀಸರು ಮಂಗಳವಾರ ಇನ್ನೂ ಏಳು ಆರೋಪಿಗಳನ್ನು ಬಂಧಿಸಿದ್ದಾರೆ. ನವೆಂಬರ್ 24 ರ ಸಂಭಾಲ್ ಹಿಂಸಾಚಾರಕ್ಕೆ ಸಂಬಂಧಿಸಿದಂತೆ ನಾಲ್ಕು ಜನರನ್ನು ಬಲಿತೆಗೆದುಕೊಂಡ ಘಟನೆಗೆ ಸಂಬಂಧಿಸಿದಂತೆ ಇದುವರೆಗೆ 47 ಜನರನ್ನು ಬಂಧಿಸಲಾಗಿದೆ.

91 ಜನರನ್ನು ಗುರುತಿಸಲಾಗಿದ್ದು, ಉಳಿದ ಆರೋಪಿಗಳಿಗಾಗಿ ಶೋಧ ನಡೆಯುತ್ತಿದೆ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ (ಎಎಸ್‌ಪಿ) ಶ್ರೀಶ್ ಚಂದ್ರ ಸುದ್ದಿಗಾರರಿಗೆ ತಿಳಿಸಿದ್ದಾರೆ.

ಸಂಭಾಲ್ ಹಿಂಸಾಚಾರದಲ್ಲಿ ಮತ್ತೆ 7 ಆರೋಪಿಗಳನ್ನು ಬಂಧಿಸಲಾಗಿದ್ದು, ಇಂದು ಬಂಧಿತ ಆರೋಪಿಗಳನ್ನು ಶೋಯೆಬ್, ಸುಜಾವುದ್ದೀನ್, ರಹತ್, ಮೊಹಮ್ಮದ್ ಅಜಂ, ಅಜರುದ್ದೀನ್, ಜಾವೇದ್ ಮತ್ತು ಮುಸ್ತಫಾ ಎಂದು ಗುರುತಿಸಲಾಗಿದೆ. ಉಳಿದ ಆರೋಪಿಗಳ ಬಂಧನಕ್ಕೆ ಹೆಚ್ಚಿನ ತಂಡಗಳನ್ನು ರಚಿಸಲಾಗಿದೆ. ಸಂಭಾಲ್ ಹಿಂಸಾಚಾರಕ್ಕೆ ಸಂಬಂಧಿಸಿದಂತೆ 11 ಎಫ್‌ಐಆರ್‌ಗಳನ್ನು ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

"ನವೆಂಬರ್ 24 ರಂದು ಜಾಮಾ ಮಸೀದಿ ಪ್ರದೇಶದ ಬಳಿ ಹಿಂಸಾತ್ಮಕ ಘಟನೆ ನಡೆದಿದೆ. ಘಟನೆಗೆ ಸಂಬಂಧಿಸಿದಂತೆ ಒಟ್ಟು 47 ಜನರನ್ನು ಬಂಧಿಸಲಾಗಿದೆ. 91 ಜನರನ್ನು ಇನ್ನೂ ಬಂಧಿಸಬೇಕಾಗಿದೆ. ಇಂದು ಇನ್ನೂ ಏಳು ಜನರನ್ನು ಬಂಧಿಸಲಾಗಿದೆ" ಎಂದು ಎಎಸ್‌ಪಿ ತಿಳಿಸಿದ್ದಾರೆ.

ಹಿಂಸಾಚಾರದಲ್ಲಿ ಭಾಗಿಯಾಗಿರುವ ಆರೋಪದ ಮೇಲೆ ಸಂಭಾಲ್‌ನ ದೀಪಾ ಸರೈ ನಿವಾಸಿ ಮೊಹಮ್ಮದ್ ಅಕಿಬ್‌ನನ್ನು ಪೊಲೀಸರು ಬಂಧಿಸಿದ್ದಾರೆ. ಸೋಮವಾರ ಅವರನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಿ ಜೈಲಿಗೆ ಕಳುಹಿಸಲಾಗಿದೆ. ಜನಸಮೂಹವು ಪೊಲೀಸ್ ತಂಡದ ಮೇಲೆ ದಾಳಿ ಮಾಡಿದಾಗ ಇನ್ಸ್‌ಪೆಕ್ಟರ್‌ನಿಂದ ಪಿಸ್ತೂಲ್ ಮ್ಯಾಗಜೀನ್ ಮತ್ತು ಅಶ್ರುವಾಯು ಶೆಲ್‌ಗಳನ್ನು ಕಿತ್ತುಕೊಂಡಿದ್ದಾನೆ ಎಂಬ ಆರೋಪವಿದೆ.

ಲಕ್ನೋದ ವಿಧಿ ವಿಜ್ಞಾನ ಪ್ರಯೋಗಾಲಯದ (ಎಫ್‌ಎಸ್‌ಎಲ್) ತಜ್ಞರ ತಂಡವು ಉತ್ತರ ಪ್ರದೇಶದ ಸಂಭಾಲ್‌ಗೆ ತಲುಪಿದಾಗ, ನವೆಂಬರ್ 24 ರಂದು ಗಲಭೆ ಆರಂಭವಾಗಿ ನಗುಂಡಿನ ದಾಳಿಗೆ ಕಾರಣವಾಯಿತು. ಈ ಘಟನೆಯಿಂದ ನಾಲ್ಕು ಜನರು ಸಾವನ್ನಪ್ಪಿ, ಹಲವಾರು ಜನರು ಗಾಯಗೊಂಡರು ಎಂದು ಪೊಲೀಸರು ತಿಳಿಸಿದ್ದಾರೆ.

ಎಫ್‌ಎಸ್‌ಎಲ್ ತಜ್ಞರು ಇತರ ತನಿಖಾಧಿಕಾರಿಗಳೊಂದಿಗೆ ಗುಂಡಿನ ದಾಳಿಗೆ ಕಾರಣವಾದ ಸಂದರ್ಭಗಳನ್ನು ಪುನರ್ನಿರ್ಮಿಸಿದ್ದಾರೆ ಎಂದು ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ಕ್ರಿಶನ್ ಕುಮಾರ್ ಸುದ್ದಿಗಾರರಿಗೆ ತಿಳಿಸಿದರು.

ನವೆಂಬರ್ 24 ರಂದು ಶಾಹಿ ಜಾಮಾ ಮಸೀದಿಯ ಎರಡನೇ ಸಮೀಕ್ಷೆಯ ಸಮಯದಲ್ಲಿ ಸಂಭಾಲ್‌ನಲ್ಲಿ ಹಿಂಸಾಚಾರವು ಸ್ಫೋಟಗೊಂಡಿತು. ಪ್ರತಿಭಟನಾಕಾರರು ಮತ್ತು ಪೊಲೀಸರ ನಡುವಿನ ಘರ್ಷಣೆಯಲ್ಲಿ ನಾಲ್ಕು ಸಾವುನೋವುಗಳು ಸಂಭವಿಸಿದವು, 29 ಪೊಲೀಸ್ ಅಧಿಕಾರಿಗಳು ಸೇರಿದಂತೆ ಹಲವರು ಗಾಯಗೊಂಡರು.

ಇದಕ್ಕೂ ಮುನ್ನ ನವೆಂಬರ್ 19 ರಂದು, ಸುಪ್ರೀಂ ಕೋರ್ಟ್ ವಕೀಲ ವಿಷ್ಣು ಶಂಕರ್ ಜೈನ್ ಅವರು ಸಲ್ಲಿಸಿದ ಅರ್ಜಿಯ ನಂತರ ಮಸೀದಿಯ ಸಮೀಕ್ಷೆಯನ್ನು ನಡೆಸಲಾಯಿತು. ಈ ಪ್ರದೇಶವು ಒಂದು ಕಾಲದಲ್ಲಿ ದೇವಾಲಯವನ್ನು ಹೊಂದಿತ್ತು ಎಂದು ಪ್ರತಿಪಾದಿಸಿದರು.

## ಜಮ್ಮು ಕಾಶ್ಮೀರ | ಸೇನಾ ವಾಹನ ಅಪಘಾತ ; ಮೃತ ಐವರು ಯೋಧರಲ್ಲಿ ಮೂವರು ಕನ್ನಡಿಗರು



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಜಮ್ಮು ಕಾಶ್ಮೀರದ ಪೂಂಛ್ ಜಿಲ್ಲೆಯ ಗಡಿ ನಿಯಂತ್ರಣ ರೇಖೆ (ಎಲ್‌ಒಸಿ) ಬಳಿ ನಿನ್ನೆ (ಡಿ.24) ಸಂಜೆ ನಡೆದ ಸೇನಾ ವಾಹನ ಅಪಘಾತದಲ್ಲಿ ಐವರು ಯೋಧರು ಸಾವನ್ನಪ್ಪಿದ್ದು, ಈ ಪೈಕಿ ಮೂವರು ಕನ್ನಡಿಗರು ಎಂದು ವರದಿಯಾಗಿದೆ.

ಒಟ್ಟು 18 ಯೋಧರು ಪ್ರಯಾಣಿಸುತ್ತಿದ್ದ ಸೇನಾ ವಾಹನ 350 ಅಡಿ ಆಳದ ಕಮರಿಗೆ ಉರುಳಿದ್ದು, ಐವರು ಯೋಧರು ಸಾವನ್ನಪ್ಪಿದ್ದಾರೆ. ಹಲವರು ಗಂಭೀರವಾಗಿ ಗಾಯಗೊಂಡಿದ್ದಾರೆ ಎಂದು ತಿಳಿದು ಬಂದಿದೆ.

ನೀಲಂನ ಸೇನಾ ಪ್ರಧಾನ ಕಚೇರಿಯಿಂದ ಬಲ್ನೋಯಿ ಘೋರಾ ಪೋಸ್ಟ್‌ಗೆ ತೆರಳುವಾಗ, ಘೋರಾ ಪೋಸ್ಟ್ ಬಳಿ ಅಪಘಾತ ಸಂಭವಿಸಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ಹೇಳಿದ್ದಾರೆ.

ಬೆಳಗಾವಿ ಬಳಿಯ ಸಾಂಬ್ರಾ ಗ್ರಾಮದ ಯೋಧ ಸುಬೇದಾರ್ ದಯಾನಂದ ತಿರಕಣ್ಣವರ (45), ಕುಂದಾಪುರ ಬಳಿಯ ಕೋಟೇಶ್ವರ ಬಿಜಾಡಿಯ ಅನೂಪ್ (33) ಮಹಾಲಿಂಗಪುರದ 25 ವರ್ಷದ ಮಹೇಶ್ ಮರಿಗೊಂಡ ಮೃತ ಕರ್ನಾಟಕದ ಯೋಧರು. ಇನ್ನಿಬ್ಬರು ಮಹಾರಾಷ್ಟ್ರದ ಯೋಧರು ಸಾವಿಗೀಡಾಗಿದ್ದಾರೆ.

ಸಿಎಂ ಸಂತಾಪ: ಅಪಘಾತದಲ್ಲಿ ಸಾವನ್ನಪ್ಪಿದ ಯೋಧರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಂತಾಪ ಸೂಚಿಸಿದ್ದಾರೆ. ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಹಾಕಿರುವ ಅವರು "ಜಮ್ಮು ಕಾಶ್ಮೀರದ ಪೂಂಛ್ ಬಳಿ ಸೇನಾ ವಾಹನ ಅಪಘಾತಕ್ಕೀಡಾಗಿ ಕನ್ನಡಿಗ ಯೋಧರಾದ ದಯಾನಂದ ತಿರಕಣ್ಣವರ, ಅನೂಪ್ ಹಾಗೂ ಮಹೇಶ್ ಮರಿಗೊಂಡ ಅವರು ಹುತಾತ್ಮರಾದ ಸುದ್ದಿ ತಿಳಿದು ನೋವಾಯಿತು. ಮೃತ ಯೋಧರ ಆತ್ಮಕ್ಕೆ ಚಿರಶಾಂತಿ ದೊರಕಲಿ, ಅವರ ಕುಟುಂಬವರ್ಗಕ್ಕೆ ಈ ನೋವು ಭರಿಸುವ ಶಕ್ತಿ ಸಿಗಲೆಂದು ದೇವರಲ್ಲಿ ಪ್ರಾರ್ಥಿಸುತ್ತೇನೆ" ಎಂದು ಬರೆದುಕೊಂಡಿದ್ದಾರೆ.

### ದಿ ಪಿನಿಕ್ಸ್ ಇಂಟರ್‌ನ್ಯಾಶನಲ್ ಶಾಲೆಯ ಆವರಣದಲ್ಲಿ ಶಾಲಾ ಮಕ್ಕಳಿಂದ ವಾರದ ಸಂತೆ

# ಲಗೂ ಲಗೂ ಬರ್ರೀ...ಎಲ್ಲಾ ಖಾಲೀ...!

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತರಕಾರಿ ಬೇಕೇನ್ರೀ... ಎಳೀ ಸವತೆಕಾಯಿ, ಬೀನ್ಸ್, ಹಿರೇಕಾಯಿ, ಮೆಣಸಿನಕಾಯಿ, ಬದನೆಕಾಯಿ... ಬರ್ರೀ.. ಬರ್ರೀ.. ಹಾ! ಬಿಸ್ಸಿ ಬಿಸಿ ಮಿರ್ಚಿ, ಖಾರಾ-ಮಂಡಕ್ಕಿ ಬೇಕೇನ್ರೀ...ಲಗೂ ಲಗೂ ಬರ್ರೀ... ಎಲ್ಲಾ ಖಾಲೀ... ಕೂಗು ಕೇಳಿ ಯಾವುದೋ ಮಾರುಕಟ್ಟೆಯ, ವಾರದ ಸಂತೆಯ ಚಿತ್ರಣ ಎಂದುಕೊಳ್ಳಬೇಡಿ. ಬದಲಾಗಿ, ಪಟ್ಟಣದ ದಿ ಪಿನಿಕ್ಸ್ ಇಂಟರ್‌ನ್ಯಾಶನಲ್ ಶಾಲೆಯ ಆವರಣದಲ್ಲಿ ಮಕ್ಕಳಿಂದ ಕೇಳಿಬರುತ್ತಿದ್ದ ಮಾತುಗಳಿವು.

ಬುದವಾರ ಶಾಲೆಯ ಆವರಣದಲ್ಲಿ ಹಮ್ಮಿಕೊಂಡಿದ್ದ ವಾರದ ಸಂತೆ ಕಾರ್ಯಕ್ರಮದ ನಿಮಿತ್ತ ಶಾಲೆಯ ಆವರಣ ಅಕ್ಷರಶಃ ಸಂತೆಯ ಗದ್ದಲದಂತೆಯೇ ಮಾರ್ಪಟ್ಟಿತ್ತು. ಕಾಯಿಪಲ್ಲೆ ಜತೆಗೆ, ಐಸ್‌ಕ್ರೀಮ್, ಮಜ್ಜಿಗಿ, ಸೀರೇಗಳು, ಪಾನಿಪುರಿ, ಹೋಳಿಗೆ ಊಟದ ಖಾನಾವಳಿ, ಸ್ಟೇಷನರಿ ಸೇರಿದಂತೆ ನಾನಾ ತರಹದ ತಿಂಡಿ-ತಿನಿಸುಗಳು, ದಿನದ ಅಗತ್ಯದ ವಸ್ತುಗಳ ಮಾರುಕಟ್ಟೆಗಳಿದ್ದವು. ಈ ಶಾಲೆಯ ಮಕ್ಕಳೆಲ್ಲಾ ತರಕಾರಿ ಮಾರಾಟ ಮಾಡುವ ರೈತರಾಗಿದ್ದರು. ಪೋಷಕರು, ಹಾಗೂ ಶಾಲೆಯ ಅಕ್ಕಪಕ್ಕದ ನಿವಾಸಿಗಳು, ಶಾಲೆಯ ಶಿಕ್ಷಕರು, ಆಡಳಿತ ಮಂಡಳಿಯವರು ಗ್ರಾಹಕರಾಗಿದ್ದರು.



ಈ ಮಕ್ಕಳ ಸಂತೆ ಮೇಳವನ್ನು ಪಿನಿಕ್ಸ್ ಶಾಲೆಯಲ್ಲಿ ಅಚ್ಚುಕಟ್ಟಾಗಿ ನಿರ್ವಹಿಸಲಾಗಿತ್ತು. ತರಕಾರಿ ಮಾರಾಟ ಮಾಡಿದ ಮಕ್ಕಳು ಗ್ರಾಹಕರ ಬಳಿ ಚಿಲ್ಲರೆಯನ್ನೂ ಬಿಡದೇ, ಹಣ ಪಡೆದು ವ್ಯಾಪಾರ-ವಹಿವಾಟು ನಡೆಸಿದ್ದು, ಪದೇ ಪದೇ ಕೂಗಿ ಕೂಗಿ ತಮ್ಮ ತಮ್ಮ ವಸ್ತುಗಳನ್ನು ಕೊಳ್ಳುವಂತೆ ಹೇಳುತ್ತಿರುವದು ಕಂಡು ಬಂದಿತು. ಕೆಲವು ಕಡೆ ಚಿಣ್ಣರು ಥೇಟ್ ರೈತರಂತೆ ವೇಷ ಧರಿಸಿ ಸಂತೆಯಲ್ಲಿ ಪಾಲ್ಗೊಂಡಿದ್ದರು. ಜನರು ಅಗತ್ಯವಾದ ತರಕಾರಿಗಳನ್ನು ಚೌಕಾಸಿ ಮಾಡಿ ಖರೀದಿ ಮಾಡಿದರು. ಚಿಲ್ಲರೆ ಇಲ್ಲದಿದ್ದರೆ ಫೋನ್ ಪೇ ಮಾಡಿ ಎಂದು ಸಹ ಮಕ್ಕಳು ಹೇಳುತ್ತಿದ್ದರು. ಮಾರುಕಟ್ಟೆಯಲ್ಲಿ ಹೇಗೆ ವ್ಯವಹರಿಸಬೇಕು, ನಿತ್ಯ ಸಂತೆಯಲ್ಲಿ ಸಿಗುವ ವಸ್ತುಗಳ ಮಾಹಿತಿಯ ಜೊತೆಗೆ ಆಗುವ ಲಾಭ-ನಷ್ಟವನ್ನು ತಿಳಿಸುವ ಕಾರ್ಯವನ್ನು ಈ ಸಂತೆಯಿಂದ ಮಾಡಿರುವದು ಎಲ್ಲರ ಗಮನ ಸೆಳೆಯಿತು.

ಆಡಳಿತ ಮಂಡಳಿ ಅಧ್ಯಕ್ಷ ಮಲ್ಲಿಕಾರ್ಜುನ ಕೊಟಗಿ, ನಿರ್ದೇಶಕರುಗಳಾದ ರಾಜಶೇಖರ ಹಾಲೇವಾಡಿಮಠ, ಶಿವಯೋಗಿ ಗಾಂಜಿ, ವಿಜಯಕುಮಾರ ಹತ್ತಿಕಾಳ, ಎಸ್.ಬಿ. ಕೊಣ್ಣೂರ, ಚಂದ್ರಶೇಖರ ಕಗ್ಗಲಗೌಡ್ರ, ಕಿರಣಕುಮಾರ ನಾಲವಾಡ, ಸೇರಿದಂತೆ ಮಹಿಳಾ ಸದಸ್ಯರು, ಶಿಕ್ಷಕಿಯರು ಸಿಬ್ಬಂದಿಗಳು ಪಾಲಕರು ಇದ್ದರು. ಮಕ್ಕಳಲ್ಲಿ ಈ ರೀತಿಯ ಚಟುವಟಿಕೆಗಳು ಹೆಚ್ಚು ಪ್ರಯೋಜನಕಾರಿಯಾಗಲಿದ್ದು, ವ್ಯಾಪಾರ ವಹಿವಾಟಿನ ಜೊತೆ ಜನರೊಂದಿಗೆ ವ್ಯವಹರಿಸುವ ಕಲೆಯನ್ನು ಮಕ್ಕಳು ತಿಳಿದುಕೊಳ್ಳಬಹುದಾಗಿದೆ. ಇದೊಂದು ಉತ್ತಮ, ಮಾದರಿ ಕಾರ್ಯಕ್ರಮವಾಗಿದೆ ಎಂದು ಪಾಲಕರು ಅಭಿಪ್ರಾಯ ವ್ಯಕ್ತಪಡಿಸಿದರು.

> ಈ ಸಂತೆ ಒಂದು ರೀತಿಯಲ್ಲಿ ಮಕ್ಕಳಲ್ಲಿ ಕುಶಲತೆ, ಸಂವಹನ ಕಲೆ, ಸಾಮಾಜಿಕ ಬದುಕಿನೊಂದಿಗೆ ಒಡನಾಟದ ಕೌಶಲ್ಯವನ್ನು ಕಲಿಸುವುದರೊಂದಿಗೆ, ಅವರಲ್ಲಿ ಸೃಜನಶೀಲತೆಯನ್ನು ಅನಾವರಣಗೊಳಿಸುವ ಉದ್ದೇಶದಿಂದ ಮತ್ತು ತೂಕದ ಮಾಹಿತಿ, ಅಳತೆ ಸಾಧನಗಳು ಅಲ್ಲದೆ ವ್ಯಾಪಾರ ರೀತಿ ನೀತಿಗಳನ್ನು ತಿಳಿಸುವ ಯೋಜನೆಯಾಗಿದೆ
> – ಸುನೀತಾ ಯರ್ಲಗಟ್ಟಿ.
> ಮುಖ್ಯೋಪಾಧ್ಯಾಯೆ, ದಿ ಪಿನಿಕ್ಸ್ ಇಂಟರ್‌ನ್ಯಾಷನಲ್ ಶಾಲೆ.

# ಸತ್ಪುರುಷರನ್ನು ಪರೀಕ್ಷಿಸಬಾರದು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಜಗತ್ತಿನಲ್ಲಿ ಅವತಾರ ಎತ್ತಿ ಬಂದಿರುವ ಸಾಧು-ಸತ್ಪುರುಷರು ನಮ್ಮನ್ನು ಉದ್ಧಾರ ಮಾಡಲೆಂದೇ ಬಂದಿರುತ್ತಾರೆ. ಅವರನ್ನೆಂದಿಗೂ ಪರೀಕ್ಷಿಸಲು ಹೋಗಬಾರದು ಎಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಆಚರಿಸಲಾದ ಸದ್ಗುರು ಶ್ರೀ ಬ್ರಹ್ಮಚೈತನ್ಯರ 111ನೇ ಪುಣ್ಯಾರಾಧನಾ ಮಹೋತ್ಸವದಲ್ಲಿ ಅವರು ಮಾತನಾಡಿದರು.

ಭಾರತದಲ್ಲಿರುವ ಅನೇಕ ಸಾಧು-ಸತ್ಪುರುಷರಲ್ಲಿ ಸದ್ಗುರು ಶ್ರೀ ಬ್ರಹ್ಮಚೈತನ್ಯ ಮಹಾರಾಜರೂ ಒಬ್ಬರು. ರಾಮನಾಮದ ಮೂಲಕ ಮುಕ್ತಿಯನ್ನು ಪಡೆಯಬಹುದು ಎಂಬುದನ್ನು ಅವರು ಈ ಜಗತ್ತಿಗೆ ಸಾರಿ ಹೇಳಿದರು ಮತ್ತು ಅದನ್ನು ಸಾಧಿಸಿ ತೋರಿದರು. ಅವರ ಚರಿತ್ರೆಯನ್ನು ಓದಿದರೆ ಜೀವನವನ್ನು ಹೇಗೆ ಪಾರಮಾರ್ಥಿಕದ ಕಡೆಗೆ ತಿರುಗಿಸಬಹುದು ಎಂಬುದು ತಿಳಿಯುತ್ತದೆ ಎಂದರು.



ಕರ್ನಾಟಕದಲ್ಲಿಯೂ ಸಹ ಶ್ರೀ ಮಹಾರಾಜರು ತಮ್ಮ ಆಗಮನದ ಮೂಲಕ ಅನೇಕ ಭಕ್ತರನ್ನು ಉದ್ಧರಿಸಿದ್ದಾರಲ್ಲದೆ ಅನೇಕ ರಾಮ ಮಂದಿರಗಳ ಸ್ಥಾಪನೆಯನ್ನೂ ಮಾಡಿದ್ದಾರೆ. ಸದ್ಗುರು ಶ್ರೀ ಬ್ರಹ್ಮಾನಂದ ಮಹಾರಾಜರನ್ನು ಕರ್ನಾಟಕದಲ್ಲಿ ರಾಮನಾಮ ಪ್ರಸರಣೆಗೆಂದೇ ನೇಮಿಸಿ ಅವರಿಂದ ಅನೇಕ ಭಕ್ತರೋದ್ಧಾರದ ಕಾರ್ಯಗಳನ್ನು ಮಾಡಿದ್ದಾರೆ. ಈಗ ಆ ಕೆಲಸವನ್ನು ಶ್ರೀ ಕ್ಷೇತ್ರ ಹೆಬ್ಬಳ್ಳಿಯ ಮೂಲಕ ಸದ್ಗುರು ಶ್ರೀ ದತ್ತಾವಧೂತ ಮಹಾರಾಜರ ಮೂಲಕ ಮಾಡಿಸುತ್ತಿದ್ದಾರೆ. ಹೀಗಾಗಿ ಶ್ರೀಕ್ಷೇತ್ರ ಹೆಬ್ಬಳ್ಳಿ ಈಗ ಭಕ್ತರ ಪಾಲಿನ ಎರಡನೆ ಗೋಂದಾವಲೆಯಾಗಿದೆ ಎಂದು ಕುಲಕರ್ಣಿ ಅಭಿಪ್ರಾಯಪಟ್ಟರು.

ಗುಲಾಲು ಹಾಕುವ ಮೂಲಕ ಶ್ರೀ ಗುರುಗಳಿಗೆ ಬಭಕ್ತಿ ಸಮರ್ಪಣೆ ಮಾಡಲಾಯಿತು. ಈ ಸಂದರ್ಭದಲ್ಲಿ ನಿವೃತ್ತ ಉಪನ್ಯಾಸಕ ಎಸ್.ಎಚ್. ಕುಲಕರ್ಣಿ, ಪ್ರಶಾಂತ ಗ್ರಾಮಪುರೋಹಿತ, ನಿಖಿತಾ ಗ್ರಾಮಪುರೋಹಿತ, ಪದ್ಮಾ ಕುಲಕರ್ಣಿ, ರೂಪಾ ಗ್ರಾಮಪುರೋಹಿತ, ವಿಮಲಾ ಬಾಯಿ ಗ್ರಾಮಪುರೋಹಿತ, ಸೀಮಾ ಕೊಂಡಿ, ಜ್ಯೋತಿ ನಾಡಿಗೇರ, ಪ್ರಿಯಾ ಕುಲಕರ್ಣಿ, ಪ್ರಿಯಾ ನಾಡಿಗೇರ, ಪ್ರಭಾ ರಾಯಭಟ್ಟನವರ, ರಾಜಶ್ರೀ ಕುಲಕರ್ಣಿ ಮುಂತಾದವರಿದ್ದರು.

## ಶಾಲಾ ಕೊಠಡಿ ಬಾಗಿಲು ಒಡೆದ ಕಿಡಿಗೇಡಿಗಳು

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ನಗರದ ಟಿಪ್ಪು ಸುಲ್ತಾನ್ ವೃತ್ತದಲ್ಲಿಯ ಬಹಾರ ಪೇಟೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಕೊಠಡಿ ಬಾಗಿಲು, ಗಾಜು ಒಡೆದ ಕಿಡಿಗೇಡಿಗಳನ್ನು ಪತ್ತೆಹಚ್ಚಿ ಕ್ರಮ ಕೈಗೊಳ್ಳಲು ಜನಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಎಸ್.ಎ. ಗಫಾರ್ ಹಾಗೂ ಪಾಸ್ಟರ್ ಅಸೋಸಿಯೇಷನ್ ಜಿಲ್ಲಾಧ್ಯಕ್ಷ ಚನ್ನಬಸಪ್ಪ ಅಪ್ಪಣ್ಣವರ್ ಮುಂತಾದವರು ಆಗ್ರಹಿಸಿದ್ದಾರೆ,

ಮೇ 2022ರಿಂದ ಇಲ್ಲಿಯವರೆಗೆ 25ಕ್ಕೂ ಹೆಚ್ಚು ಶಾಲೆಯ ಕೊಠಡಿಗಳ ಬಾಗಿಲುಗಳ ಮತ್ತು ಗೇಟಿನ ಕೀಲಿಗಳನ್ನು ಕಿಡಿಗೇಡಿಗಳು ಒಡೆದಿದ್ದಾರೆ. 2022ರಲ್ಲಿ ಗೇಟ್ ಮುರಿದು ಶಾಲೆಯ ವರ್ಗದ ಬಾಗಿಲಿಗೆ ಕಿಡಿಗೇಡಿಗಳು ಸತ್ತ ಹಾವು ನೇತು ಹಾಕಿದ್ದರು. ಆಗ ಪೊಲೀಸರು ಬಂದು ಶಾಲಾ ಕೊಠಡಿ ಬಾಗಿಲಿಗೆ ಸತ್ತ ಹಾವು ಹಾಕಿರುವುದನ್ನು ಪರಿಶೀಲಿಸಿ ಚಿತ್ರಗಳನ್ನು ತೆಗೆದುಕೊಂಡು ಹೋದರು. ಬಳಿಕವೂ ಪದೇಪದೇ ಕೊಠಡಿಗಳ ಬಾಗಿಲುಗಳ ಕೀಲಿಗಳನ್ನು ಹಾಗೂ ಗೇಟಿನ ಕೀಲಿಗಳನ್ನು ಒಡೆಯುವುದು ಮುಂದುವರೆಸಿದ್ದಾರೆ.




ಇತ್ತೀಚೆಗೆ ಶಾಲೆಯ ಕೊಠಡಿ ಬಾಗಿಲು ಮತ್ತು ಉರ್ದು ಶಾಲಾ ಕೊಠಡಿಯ ಗಾಜು ಒಡೆದಿದ್ದಾರೆ. ಶಿಕ್ಷಣದ ಮಹತ್ವ ತಿಳಿಯದೆ ಇರುವ ಅವಿದ್ಯಾವಂತ ಕಿಡಿಗೇಡಿಗಳು ಇಂತಹ ಕೃತ್ಯಗಳನ್ನು ಮಾಡಲು ಸಾಧ್ಯ. ತಪ್ಪಿತಸ್ಥರನ್ನು ಪತ್ತೆ ಹಚ್ಚಿ ಕ್ರಮ ಕೈಗೊಳ್ಳುವ ಮೂಲಕ ಮುಂದೆ ಇಂತಹ ಘಟನೆಗಳು ನಡೆಯದಂತೆ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕೆಂದು ಜನಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಎಸ್.ಎ. ಗಫಾರ್, ಪಾಸ್ಟರ್ ಅಸೋಸಿಯೇಷನ್ ಅಧ್ಯಕ್ಷ ಫಾದರ್ ಚನ್ನಬಸಪ್ಪ ಅಪ್ಪಣ್ಣವರ್ ಆಗ್ರಹಿಸಿದ್ದಾರೆ.

# ಮಾದಾರ ಚನ್ನಯ್ಯ ಜಯಂತ್ಯುತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಕಳಸಾಪೂರ ಗ್ರಾಮದ ಬಸವಕೇಂದ್ರದ ವತಿಯಿಂದ ನಡೆದ 1539ನೇ ಶಿವಾನುಭವದಲ್ಲಿ ಮಹಾಮಹಿಮ ಮಾದರ ಚನ್ನಯ್ಯನವರ ಜಯಂತ್ಯುತ್ಸವನ್ನು ಆಚರಿಸಲಾಯಿತು. ಪ್ರಶಾಂತ ಬ.ಖಂಡಮ್ಮನವರ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.

ಬಸವಕೇಂದ್ರದ ಕಾರ್ಯಾಧ್ಯಕ್ಷ, ಕನ್ನಡಾಭಿಮಾನಿ ಮಲ್ಲಿಕಾರ್ಜುನ ಖಂಡಮ್ಮನವರ ಮಾತನಾಡಿ,

ಚೆನ್ನಯ್ಯ ಶರಣರು ಕಲ್ಯಾಣದ ನೆಲದಲ್ಲಿ ಸಂಚರಿಸಿ ಶರಣರ ಲಿಂಗಯೋಗದ ಪಥವನ್ನು ಅರಿತು ಆಚರಿಸುವುದಕ್ಕೆ ಬಸವಕಲ್ಯಾಣಕ್ಕೆ ಸಮೀಪದಲ್ಲಿರುವ ಅಮೃತ ಕುಂಡ ಸಾಕ್ಷಿಯಾಗಿದೆ ಎಂದರು.



ಮಾದಾರ ಸಮಾಜದ ಹಿರಿಯರಾದ ಶೇಖಮ್ಮ ಕೆಂಚಪ್ಪ ಮಾದರ ಇವರನ್ನು ಸಿ.ಬಿ. ಪಲ್ಲೇದ, ಬಸವರಾಜ ಕಣವಿ, ಮಂಜು ರಾಮನಗೌಡರ, ಮಲ್ಲಪ್ಪ ಅಂಗಡಿ, ಶೋಭಾ ಪಿ.ಹಗೇದಾಳ, ಶೈಲಾ ಎಸ್.ಹಗೇದಾಳ, ಜಯಶ್ರೀ ಸೋಂಪೂರ, ಮಧು ಮಾದರ, ಶೃತಿ ಮಾದರ, ರಾಧಿಕಾ ದೊಡ್ಡಮನಿ, ಮೇಘಾ ಮಾದರ, ನಿರ್ಮಲ ಮಾದರ, ಮನಿಷಾ ಮಾದರ ಸಮ್ಮುಖದಲ್ಲಿ ಸನ್ಮಾನಿಸಲಾಯಿತು.

ಗ್ರಾಮದ ಹಿರಿಯರಾದ ಸಿ.ಬಿ. ಪಲ್ಲೇದ ಸಮಾರೋಪ ನುಡಿಗಳನ್ನಾಡಿದರು. ವಚನ ಮಂಗಲಗೀತೆಯೊಂದಿಗೆ ಈ ಕಾರ್ಯಕ್ರಮ ಮುಕ್ತಾಯ ಗೊಂಡಿತು ಎಂದು ಮಂಜು ರಾಮನಗೌಡರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾರ್ಮಿಕ ಸಂಘಟನೆಯಲ್ಲಿ ತೊಡಗಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಕೆನರಾ ಬ್ಯಾಂಕ್ ಕಾರ್ಯನಿರತ ನೌಕರರ ಸಂಘದ (ಸಿ.ಬಿ.ಡಬ್ಲ್ಯೂ.ಇ.ಯು.) ಗದಗ ಜಿಲ್ಲಾ ಮಟ್ಟದ ಅಹವಾಲು ಆಲಿಸುವ ಹಾಗೂ ಸಂಘಕ್ಕೆ ಸೇರ್ಪಡೆಯಾದ ಸದಸ್ಯರನ್ನು ಬರಮಾಡಿಕೊಳ್ಳುವ ಕಾರ್ಯಕ್ರಮವನ್ನು ನಗರದ ಲೋಟಸ್ ಇನ್ ಹೋಟೆಲ್‌ನಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಸಂಘದ ರಾಜ್ಯ ಕಾರ್ಯದರ್ಶಿ ಬಸನಗೌಡ ಪಾಟೀಲ ಭಾಗವಹಿಸಿ ಮಾತನಾಡಿ, ಬ್ಯಾಂಕ್‌ನ ಪ್ರಸಕ್ತ ಬೆಳವಣೆಗೆಗಳು ಹಾಗೂ ಸಂಘದ ಕಾರ್ಯಚಟುವಟಿಕೆಗಳ ಬಗ್ಗೆ ತಿಳಿಸಿದರು.




ರಾಷ್ಟ್ರೀಯ ಕಾರ್ಯಕಾರಿಣಿ ಸಮಿತಿ ಸದಸ್ಯರು ಹಾಗೂ ರಾಜ್ಯ ಉಪಾಧ್ಯಕ್ಷರಾದ ಯಚ್ಚರಸ್ವಾಮಿ ನಾಯ್ಕ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು. ರಾಜ್ಯ ಸಂಘಟನಾ ಕಾರ್ಯದರ್ಶಿ ಶಿವರಂಜನ ಮಾತನಾಡಿ ಮುಂದಿನ ಕಾರ್ಯತಂತ್ರವನ್ನು ವಿವರಿಸಿದರು.

ಹರೀಶ ಬಾಗಲ ಕೋಟಿ, ಪ್ರಸನ್ನ ಗರಗ, ಪರಶುರಾಮ ಹಂಜಗಿ, ಮೌಲಾಸಾಬ, ರಾಘವೇಂದ್ರ ಭಜಂತ್ರಿ, ಹೇಮಂತ, ಸತ್ಯಮ್ಮ, ಪಿಗ್ಮಿ ಸಂಗ್ರಹಕಾರರಾದ ವಿರೇಶ ಬಾಗೋಡಿ, ಯಲ್ಲಪ್ಪ ಶೇರಖಾನೆ, ನಿಂಗಪ್ಪ ಪಶುಪತಿಹಾಳ, ನೂರಅಹಮ್ಮದ ಅತ್ತಾರ, ಕಿನ್ನಾಳ, ಜೋಶಿ ಇವರನ್ನು ಸಂಘಕ್ಕೆ ಹೂಗುಚ್ಛ ನೀಡಿ ಬರಮಾಡಿಕೊಳ್ಳಲಾಯಿತು.

ಅಶೋಕ ಗೌಡ್ರ ಕಾರ್ಯಕ್ರಮ ನಿರೂಪಿಸಿದರು. ಪರಶುರಾಮ ರಾಘಣ್ಣವರ ವಂದಿಸಿದರು.



ಗದಗ-ಬೆಟಗೇರಿಯ ಆನಂದ ವೃದ್ಧಾಶ್ರಮದಲ್ಲಿ ನಡೆದ ಉಚಿತ ನೇತ್ರ ಮತ್ತು ಮಂಡಿನೋವು ತಪಾಸಣೆ ಶಿಬಿರದಲ್ಲಿ ಸ್ವಾತಂತ್ರ್ಯ ಹೋರಾಟಗಾರರಿಗೆ ಸಹಕಾರ ನೀಡುವ ಮೂಲಕ ಸೇವೆ ಸಲ್ಲಿಸಿದ, ಶತಾಯುಷಿ ಶಾಂತಾಬಾಯಿ ಸುಬ್ಬರಾವ್ ವೆರ್ಣೇಕರ್ ಇವರನ್ನು ಸನ್ಮಾನಿಸಿ ಅಭಿನಂದಿಸಿ ಗೌರವಿಸಲಾಯಿತು.

# ಸನ್ಮಾರ್ಗ ಪ.ಪೂ ಮಹಾವಿದ್ಯಾಲಯದಲ್ಲಿ ಪಾಲಕರ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಕರ ಕನಸು ನನಸಾಗಲು ಪಾಲಕರ ಸಹಾಯ ಸಹಕಾರ ಅವಶ್ಯವಾಘಿದೆ ಎಂದು ಸನ್ಮಾರ್ಗ ಪದವಿಪೂರ್ವ ಮಹಾವಿದ್ಯಾಯದ ನಿರ್ದೇಶಕ ಪ್ರೊ. ರೋಹಿತ ಒಡೆಯರ್ ಅಭಿಪ್ರಾಯಪಟ್ಟರು.

ಅವರು ಸನ್ಮಾರ್ಗ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಪ್ರಥಮ ವರ್ಷದ ವಿಜ್ಞಾನ ಹಾಗೂ ವಾಣಿಜ್ಯ ವಿದ್ಯಾರ್ಥಿಗಳ ಪಾಲಕರ ಸಭೆಯಲ್ಲಿ ಭಾಗವಹಿಸಿ ಮಾತನಾಡುತ್ತಾ, ಇಂದಿನ ವಿದ್ಯಾರ್ಥಿಗಳು ಪಾಠದಲ್ಲಿ ಪ್ರಗತಿ ಸಾಧಿಸಿದ್ದಾರೆ. ಆದರೆ ಪಠ್ಯೇತರ ಚಟುವಟಿಕೆಗಳಲ್ಲಿ ಅನಾಸಕ್ತರಾಗಿದ್ದಾರೆ. ಆದ್ದರಿಂದ ಪಾಲಕರಾದ ತಾವು ತಮ್ಮ ಮಗುವಿನ ದೈಹಿಕ ಬೆಳವಣಿಗೆಯತ್ತಲೂ ಗಮನಹರಿಸಬೇಕೆಂದು ಸೂಚಿಸಿದರು.




ಪ್ರೊ. ಉಡುಪಿ ದೇಶಪಾಂಡೆ ಮಾತನಾಡುತ್ತಾ, ಈ ಬಾರಿ ಪಿ.ಯು ಬೋರ್ಡ್‌ನವರು ಅನುಸರಿಸುತ್ತಿರುವ ಪರೀಕ್ಷಾ ಪದ್ಧತಿಯನ್ನು ಪಾಲಕರಿಗೆ ಸವಿಸ್ತಾರವಾಗಿ ವಿವರಿಸಿದರಲ್ಲದೇ, ಮಹಾವಿದ್ಯಾಲಯದಲ್ಲಿ ಅದಕ್ಕೆ ಪೂರಕವಾಗಿ ಕೈಗೊಂಡ ಚಟುವಟಿಕೆಗಳನ್ನು ಸಭೆಗೆ ಸವಿಸ್ತಾರವಾಗಿ ಹೇಳಿದರು.

ಸಭೆಯಲ್ಲಿ ಮಹೇಶಗೌಡ ಟಿ.ಪಾಟೀಲ, ಶಂಕರ ಕಲಬುರ್ಗಿ, ಪುರಾಣಿಕ, ಶ್ವೇತಾ ಸಂಕನೂರ ಪಾಲಕರ ಪರವಾಗಿ ಮಾತನಾಡಿದರು. ವಾಣಿಜ್ಯ ವಿಭಾಗದ ಕೋ-ಆರ್ಡಿನೇಟರ್ ಪ್ರೊ. ಎಸ್.ಎಸ್. ವಜ್ರಬಂಡಿ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದರು.

ವೇದಿಕೆಯ ಮೇಲೆ ಆಡಳಿತ ಮಂಡಳಿಯ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ, ಪ್ರಾಚಾರ್ಯ ಪ್ರೇಮಾನಂದ ರೋಣದ, ಆಡಳಿತಾಧಿಕಾರಿ ಎಂ.ಸಿ. ಹಿರೇಮಠ, ನಿರ್ದೇಶಕರಾದ ಪ್ರೊ. ರೋಹಿತ, ಪ್ರೊ. ರಾಹುಲ ಒಡೆಯರ, ಪ್ರೊ. ಪುನೀತ ದೇಶಪಾಂಡೆ, ಪ್ರೊ. ಸೈಯ್ಯದ್ ಮತಿನ್ ಮುಲ್ಲಾ ಉಪಸ್ಥಿತರಿದ್ದರು. ಪ್ರೊ. ಶ್ರೀಶುಭಾ ಶಿರಹಟ್ಟಿ ಸ್ವಾಗತಿಸಿದರೆ, ಪ್ರೊ. ವಿಜಯ ಹೆಬಸೂರ ವಂದಿಸಿದರು.

'ಬಯಲಾಟ : ಪರಂಪರೆ ಮತ್ತು ಪ್ರಯೋಗ' ಸಂವಾದ ಕಾರ್ಯಕ್ರಮದಲ್ಲಿ ಡಾ. ಕೆ.ಆರ್. ದುರ್ಗಾದಾಸ್

# ಬಯಲಾಟ ಕಲೆಯ ವೈಭವ ಮರುಕಳಿಸಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಬಯಲಾಟದ ಕಲೆಗಳು ಯಕ್ಷಗಾನದಂತೆಯೇ ವಿಶ್ವವಿಖ್ಯಾತಗೊಳ್ಳಲು ಪಠ್ಯ, ನೃತ್ಯ, ಹಾಡುಗಾರಿಕೆಯಲ್ಲಿ ಹಲವು ಬದಲಾವಣೆಗಳನ್ನು ತಂದು ಶಿಸ್ತುಬದ್ಧವಾಗಿ ಪ್ರದರ್ಶನಗೊಂಡರೆ ತನ್ನ ಗತವೈಭವವನ್ನು ಪಡೆಯುವುದರಲ್ಲಿ ಅನುಮಾನವಿಲ್ಲ. ಇಂತಹ ಬದಲಾವಣೆಗಳು ಕಾಲದ ಅಗತ್ಯವೆಂದು ಕರ್ನಾಟಕ ಬಯಲಾಟ ಅಕಾಡೆಮಿಯ ಅಧ್ಯಕ್ಷ ಡಾ. ಕೆ.ಆರ್. ದುರ್ಗಾದಾಸ್ ತಿಳಿಸಿದರು.

ನಗರದ ಕೆ.ಎಲ್.ಇ ಸಂಸ್ಥೆಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಕನ್ನಡ ವಿಭಾಗವು ಕರ್ನಾಟಕ ಬಯಲಾಟ ಅಕಾಡೆಮಿಯ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ 'ಬಯಲಾಟ : ಪರಂಪರೆ ಮತ್ತು ಪ್ರಯೋಗ' ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

ಜನಪದ ಕಲೆಗಳು ಮನುಷ್ಯನಷ್ಟೇ ಪ್ರಾಚೀನತೆ ಹೊಂದಿದ ವಿಶಿಷ್ಟವಾದ ಕಲೆ. ಸಮಾಜದಲ್ಲಿರುವ ಅಂಕು-ಡೊಂಕು ತಿದ್ದುವ ಶಕ್ತಿ ಜನಪದ ಕಲೆಯಲ್ಲಿ ಅಡಗಿದೆ. ಜನಪದ ಕಲೆಗಳು ಮನರಂಜನೆ ಜೊತೆ-ಗೆ ಬುದ್ಧಿಶಕ್ತಿ ಹಾಗೂ ಮಾರ್ಗದರ್ಶನ ನೀಡುವ ಮಾಧ್ಯಮವಾಗಿದೆ. ಉತ್ತರ ಕರ್ನಾಟಕ ಭಾಗದಲ್ಲಿ ದೊಡ್ಡಾಟವನ್ನು ಬಯಲಾಟ, ಅಟ್ಟದಾಟ, ಹಿರೇ ಆಟ ಎಂದು ಕರೆಯುತ್ತಾರೆ. ರಾಜ್ಯದ 20ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ದೊಡ್ಡಾಟ-ದ ಪಾರಂಪರಿಕ ಕಲಾವಿದರು ಇದ್ದಾರೆ. ವಿಭಿನ್ನ ಹೆಸರು ಮತ್ತು ಶೈಲಿಗಳೂ ಇವೆ. ಹಳ್ಳಿ ಜನರು ಆಡುವ ಆಟ ಎಂದು ಈ ಕಲೆ ನಿರ್ಲಕ್ಷ್ಯಕ್ಕೆ ಒಳಗಾಗಿದೆ. ಭರತನ ನಾಟ್ಯಶಾಸ್ತ್ರಕ್ಕೂ ಬಯಲಾಟದ ಕುಣಿತಗಳೇ ಮೂಲವಾಗಿವೆ ಎಂದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಡಾ. ಸಿದ್ದಣ್ಣ ಜಕಬಾಳ ಮಾತನಾಡಿ,



ಸೊಂಟ, ಕಂಠ ಗಟ್ಟಿಯಿದ್ದರೆ ಮಾತ್ರ ಬಯಲಾಟ. ದೊಡ್ಡಾಟವನ್ನು ಬಯಲಾಟ ಎಂದೂ ಕರೆಯುತ್ತಾರೆ. ಹಾಡು, ನೃತ್ಯ, ಭಂಗಿ ಮತ್ತು ಮುದ್ರೆಗಳ ಬಳಕೆ ಇರುವ ವಿಶಿಷ್ಟ ದೃಶ್ಯಕಲೆ ಇದು. ಪಾತ್ರಧಾರಿಗಳ ದನಿ ಗಟ್ಟಿಯಾಗಿರಬೇಕು. ಕಲಿಯುವ ಆಸಕ್ತಿ ಇದ್ದರವರು ಯಾರೇ ಬಂದರೂ ಬಯಲಾಟ ಅಕಾಡೆಮಿಯು ಅವರ ಜೊತೆಗಿರುತ್ತದೆ ಎಂದರು.

ಬಯಲಾಟ ಅಕಾಡೆಮಿಯ ಸಂಶೋಧನಾ ಸಹಾಯಕರಾದ ಡಾ. ಅಂದಯ್ಯ ಅರವಟಗಿಮಠ ಮಾತನಾಡಿ, ಕರಾವಳಿ ಪ್ರದೇಶದಲ್ಲಿ 3 ಸಾವಿರಕ್ಕೂ ಹೆಚ್ಚು ಯಕ್ಷಗಾನದ ವೃತ್ತಿಪರ ತಂಡಗಳಿವೆ. ಕರಾವಳಿಯ ಯಕ್ಷಗಾನಕ್ಕೆ ಅಂತಹದ್ದೊಂದು ವಿಶ್ವಮಾನ್ಯತೆ ಸಿಗಲು ಕಾರಣರಾದವರು ಶಿವರಾಮ ಕಾರಂತರು ಮತ್ತು ಕರಾವಳಿಯ ಸಮಸ್ತ ವಿದ್ಯಾವಂತರು

ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯರಾದ ಶಂಕ್ರಣ್ಣ ಸಂಕಣ್ಣವರ ಮಾತನಾಡಿ, ಇಂದಿನ ದೃಶ್ಯ ಮಾಧ್ಯಮದ ಭರಾಟೆಯಲ್ಲಿ ಗ್ರಾಮೀಣ ಪ್ರದೇಶದ ದೊಡ್ಡಾಟ, ಬಯಲಾಟದಂತಹ ಕಲೆಗಳು ಮರೆಯಾಗುತ್ತಿದ್ದು, ಅವುಗಳನ್ನು ಉಳಿಸಿ ಬೆಳೆಸುವ ಕಾರ್ಯ ನಿರಂತರವಾಗಿ ನಡೆಯಬೇಕು. ಗ್ರಾಮೀಣ ಪ್ರದೇಶದ ಕಲೆಗಳನ್ನು ಇಂದಿನ ಯುವ ಪೀಳಿಗೆಗೆ ಕಲಿಸುವತ್ತ ಕಲಾವಿದರು ಗಮನ ಹರಿಸಬೇಕು. ಇಂದಿನ ಯುವ ಪೀಳಿಗೆ ಪಾಶ್ಚಿಮಾತ್ಯ ಸಂಸ್ಕೃತಿಗೆ ಮಾರು ಹೋಗಿದ್ದು, ಎಲ್ಲ ಪರಂಪರೆಗಳಿಗೂ ಧಕ್ಕೆ ಬರುತ್ತಿದೆ ಎಂದು ವಿಷಾದಿಸಿದರು.

ಎಂದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಪ್ರಾಚಾರ್ಯ ಡಾ. ಎ.ಕೆ. ಮಠ, ಇಂದಿನ ಮಕ್ಕಳು ಬಹುತೇಕ ಸಮಯವನ್ನು ಮೊಬೈಲ್ ಫೋನ್‌ನಲ್ಲಿಯೇ ಕಳೆಯುತ್ತಿದ್ದಾರೆ. ಅವರಿಗೆ ಸಂಗೀತ, ನಾಟಕ, ದೊಡ್ಡಾಟ, ರಂಗ ಗೀತೆ, ವಾದ್ಯಗಳ ಅರಿವೇ ಇಲ್ಲ. ಇಂತಹ ಕಲೆಗಳನ್ನು ಉಳಿಸುವ ಅಗತ್ಯವಿದೆ.

ಅಶೋಕ ಸುತಾರ ಪ್ರಾರ್ಥಿಸಿದರು. ಶಿವರೆಡ್ಡಿ ಅಮರಶೆಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ ಬಯಲಾಟ ಕಲಾವಿದರೊಂದಿಗೆ ಸಂವಾದ ಕಾರ್ಯಕ್ರಮ ಯಶಸ್ವಿಯಾಗಿ ಜರುಗಿತು. ಡಾ. ರಾಮಚಂದ್ರ ಪಡೇಸೂರು ನಿರೂಪಿಸಿದರು. ಡಾ. ಅಂದಯ್ಯ ಅರವಟಗಿಮಠ ವಂದಿಸಿದರು. ಪ್ರೊ. ಚಂದ್ರಶೇಖರ ವಸ್ತ್ರದ, ಡಾ. ಜಿ.ಬಿ. ಪಾಟೀಲ, ವಿವೇಕಾನಂದಗೌಡ ಪಾಟೀಲ, ಅಶೋಕ ಬಣ್ಣದ ಉಪಸ್ಥಿತರಿದ್ದರು.

ಖಾನಾಪೂರದ ಅಂಗನವಾಡಿ ಕೇಂದ್ರದಲ್ಲಿ ಮಕ್ಕಳ ಸುರಕ್ಷತೆ ಯಾರ ಹೊಣೆ, ಗೊಂದಲಕ್ಕೆ ಅಂತ್ಯ ಯಾವಾಗ?

# ಗೊಂದಲದ ಗೂಡಾದ ಅಂಗನವಾಡಿ ಕೇಂದ್ರ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಾ ಕೇಂದ್ರದ ಸಮೀಪವಿರುವ ಪಟ್ಟಣ ಪಂಚಾಯಿತಿಯ 1ನೇ ವಾರ್ಡ್‌ನ ಅಂಗನವಾಡಿ ಕೇಂದ್ರವು ದಿನದಿಂದ ದಿನಕ್ಕೆ ಗೊಂದಲದ ಗೂಡಾಗಿ ಮಾರ್ಪಡುತ್ತಿದೆ. ಇಲ್ಲಿ ಮಕ್ಕಳ ಸುರಕ್ಷತೆ ಯಾರ ಹೊಣೆ ಎಂಬ ಪ್ರಶ್ನೆ ಸ್ಥಳೀಯರನ್ನು ಕಾಡುತ್ತಿದೆ.



ಇತ್ತೀಚೆಗೆ ವಾರ್ಡ್‌ನಲ್ಲಿಯ ಅಂಗನವಾಡಿ ಕೇಂದ್ರಕ್ಕೆ ಸಹಾಯಕಿ ಹುದ್ದೆಯಿಂದ ಕಾರ್ಯಕರ್ತೆಯ ಹುದ್ದೆಗೆ ಬಡ್ತಿ ಪಡೆದ ಕಾರ್ಯಕರ್ತೆಯೊಬ್ಬರನ್ನು ಈ ಕೇಂದ್ರಕ್ಕೆ ನಿಯೋಜಿಸಲಾಗಿದ್ದು, ಇಲಾಖೆಯ ನಿಯಮಾನುಸಾರ ನೇಮಕಾತಿ ಮಾಡಲಾಗಿದೆ ಎಂದು ಸ್ಥಳೀಯ ಅಧಿಕಾರಿಗಳು ಹೇಳುತ್ತಿದ್ದಾರೆ. ಇದಕ್ಕೆ ಸ್ಥಳೀಯರು ವಿರೋಧ ವ್ಯಕ್ತಪಡಿಸಿ ಕೇಂದ್ರಕ್ಕೆ ಬೀಗ ಹಾಕಿದ್ದರು. ತದನಂತರ ಸಿಡಿಪಿಓ ಭೇಟಿ ನೀಡಿ ಸ್ಥಳೀಯರಿಗೆ ಮನವರಿಕೆ ಮಾಡಿ, ಕೇಂದ್ರದ ಬೀಗವನ್ನು ತೆರೆಸಿ ತಾತ್ಕಾಲಿಕವಾಗಿ ಸಹಾಯಕಿಗೆ ಮಕ್ಕಳ ಆರೈಕೆ ಹಾಗೂ ಫಲಾನುಭವಿಗಳಿಗೆ ಆಹಾರ ವಿತರಿಸುವ ಜವಾಬ್ದಾರಿಯನ್ನು ವಹಿಸಿದ್ದಾರೆ. ಸಮಸ್ಯೆ ಇತ್ಯರ್ಥವಾಗುವವರೆಗೂ ಕಾರ್ಯಕರ್ತೆ ಹೊರಗೆ ಕುಳಿತು ಕರ್ತವ್ಯ ನಿರ್ವಹಿಸಲು ಸೂಚನೆ ನೀಡಿ ತೆರಳಿದ್ದಾರೆ.

ಸಹಾಯಕಿಯಿಂದ ಕಾರ್ಯಕರ್ತೆ ಹುದ್ದೆಗೆ ಬಡ್ತಿ ಪಡೆದಿದ್ದಕ್ಕೆ ನಮ್ಮದು ವಿರೋಧವಿಲ್ಲ. ಆದರೆ ನಮ್ಮ ವಾರ್ಡ್‌ನಲ್ಲೇ ಅನೇಕ ಜನ ನಿರುದ್ಯೋಗಿ ವಿದ್ಯಾವಂತ ಯುವತಿಯರಿದ್ದಾರೆ. ಅವರಿಗೆ ಅವಕಾಶ ಸಿಗುವುದು ಯಾವಾಗ ಎಂದು ಪ್ರಶ್ನಿಸಿರುವ ಸ್ಥಳೀಯರು,

ಈ ಕುರಿತು ಪ್ರತಿಕ್ರಿಯಿಸಿದ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮೃತ್ಯುಂಜಯ ಗುಡ್ಡದಾನ್ವೇರಿ, ಮುಂಬಡ್ತಿ ನೇಮಕಾತಿ ವಿಚಾರದಲ್ಲಿ ಉದ್ಭವಿಸಿರುವ ಸಮಸ್ಯೆ ಮತ್ತು ಸ್ಥಳೀಯರ ಬೇಡಿಕೆ ಕುರಿತು ಈಗಾಗಲೇ ಮೇಲಧಿಕಾರಿಗಳ ಗಮನಕ್ಕೆ ತರಲಾಗಿದೆ. ಕೇಂದ್ರದಲ್ಲಿ ಮಕ್ಕಳ ಆರೈಕೆ ಮತ್ತು ಫಲಾನುಭವಿಗಳಿಗೆ ಆಹಾರ ವಿತರಿಸಲು ಸಹಾಯಕಿಗೆ ಸೂಚಿಸಲಾಗಿದೆ ಎಂದರು.

ಯಾರಿಗೋ ಪದೋನ್ನತಿ ನೀಡಿ ಇಲ್ಲಿ ಕೆಲಸ ಮಾಡಲು ನಿಯೋಜಿಸಿದರೆ ನಾವು ಸಹಿಸುವದಿಲ್ಲ, ಈ ನೇಮಕ ರದ್ದುಪಡಿಸಿ ಸ್ಥಳೀಯರಿಗೆ ಆದ್ಯತೆ ನೀಡಬೇಕು. ಈ ಸಮಸ್ಯೆಯನ್ನು ಸರಿಪಡಿಸದಿದ್ದರೆ ಮತ್ತೆ ಕೇಂದ್ರಕ್ಕೆ ಬೀಗ ಜಡಿದು ಪ್ರತಿಭಟಿಸಲಾಗುವುದು ಎಂದು ಮುತ್ತು ಕಲಾದಗಿ, ಸಿಕಂದರ ಟಪಾಲ ಮುಂತಾದವರು ಎಚ್ಚರಿಕೆ ನೀಡಿದ್ದಾರೆ.

ಕೇಂದ್ರದಲ್ಲಿ ಮಕ್ಕಳ ಶ್ರೇಯೋಭಿವೃದ್ಧಿಗಾಗಿ ಹತ್ತು ಹಲವು ಯೋಜನೆಗಳು ಜಾರಿಯಲ್ಲಿದ್ದು, ಇಂತಹ ಘಟನೆಗಳಿಂದ ಮಕ್ಕಳ ಆರೈಕೆ ಸಹ ಸಮರ್ಪಕವಾಗುತ್ತಿಲ್ಲ. ವಾರ್ಡ್‌ನಲ್ಲಿಯ ಗರ್ಭಿಣಿ ಮಹಿಳೆಯರಿಗೆ ಸರಕಾರ ಕೊಡ ಮಾಡುವ ಸೌಲಭ್ಯಗಳು ಸರಿಯಾಗಿ ತಲುಪುತ್ತಿಲ್ಲ. ಒಟ್ಟಾರೆ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಬಿಡುಗಡೆಯಾಗುವ ಅನುದಾನ ಇಲ್ಲಿ ಸದ್ಬಳಕೆಯಾಗುತ್ತಿಲ್ಲ ಎಂಬ ಕೂಗು ಕೇಳಿ ಬರುತ್ತಿದೆ.

ಇಲಾಖೆಯ ಅಧಿಕಾರಿಗಳು ಸರಕಾರದ ನಿಯಮಾನುಸಾರ ಮುಂಬಡ್ತಿ ನೀಡಿ ಖಾಲಿ ಇರುವ ಕೇಂದ್ರಕ್ಕೆ ನಿಯೋಜಿಸಲಾಗಿದೆ ಎಂದು ಹೇಳುತ್ತಿದ್ದರೆ, ಇತ್ತ ಸ್ಥಳೀಯರಯ ಸ್ಥಳೀಯರಿಗೆ ಅವಕಾಶ ನೀಡಬೇಕೆಂದು ಹಠ ಹಿಡಿದಿದ್ದಾರೆ. ಇಂತಹ ಸಂದರ್ಭದಲ್ಲಿ ಮಕ್ಕಳು ಇಲ್ಲಿ ಸರಕಾರದ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ. ಇದಕ್ಕೆ ಸಂಬಂಧಿಸಿದ ಇಲಾಖಾ ಅಧಿಕಾರಿಗಳು ಈ ಗೊಂದಲಕ್ಕೆ ಅಂತ್ಯ ಯಾವಾಗ ಹಾಡುತ್ತಾರೆಂಬುದನ್ನು ಗ್ರಾಮಸ್ಥರು ಕಾಯುತ್ತಿದ್ದಾರೆ.

# ಏಸುಕ್ರಿಸ್ತರು ಕೂಡಾ ದೇವರ ಅವತಾರ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಾನವರ ಕಲ್ಯಾಣವನ್ನು ತನ್ನ ಜೀವನದ ಗುರಿಯಾಗಿಸಿಕೊಂಡು ಜಗತ್ತಿನ ಎಲ್ಲ ಜೀವ ರಾಶಿಗಳು ನೆಮ್ಮದಿಯಿಂದ ಜೀವನ ಸಾಗಿಸಬೇಕು ಎಂಬ ಸಂದೇಶ ಸಾರಿದ ಮಹಾನ್ ಪುರುಷ ಏಸು ಕ್ರಿಸ್ತರು ಎಂದು ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಹೇಳಿದರು.

ಅವರು ಬುಧವಾರ ಪಟ್ಟಣದ ಮುಕ್ತಿನಗರದಲ್ಲಿರುವ ಬ್ಲೆಸಿಂಗ್ ಗಾಸ್ಪೆಲ್ ಪ್ರೇಯರ್ ಚರ್ಚ್‌ನಲ್ಲಿ ಕ್ರಿಸ್‌ಮಸ್ ಅಂಗವಾಗಿ ನಡೆದ ಏಸು ಕ್ರಿಸ್ತನ ಜನ್ಮ ದಿನಾಚರಣೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ಜಗತ್ತಿನಲ್ಲಿ ವಾಸ ಮಾಡುತ್ತಿರುವ ಸಕಲ ಜೀವರಾಶಿಗಳಿಗೆ ಲೇಸನ್ನು ಬಯಸುವುದೇ ನಿಜವಾದ ಧರ್ಮ. ಯಾವ ಧರ್ಮವೂ ಕನಿಷ್ಠವಲ್ಲ, ಯಾವ ಧರ್ಮವೂ ಶ್ರೇಷ್ಠವಲ್ಲ. ದೇವನೊಬ್ಬ ನಾಮ ಹಲವು ಎನ್ನುವಂತೆ ಏಸುಕ್ರಿಸ್ತರು ಕೂಡಾ ದೇವರ ಅವತಾರವಾಗಿದ್ದಾರೆ ಎಂದು ಹೇಳಿದರು.

ಚರ್ಚ್‌ನ ಫಾದರ್ ರೆ.ಜಿ.ಎಂ. ನಾಯಕ್ ಮಾತನಾಡಿ, ಏಸುಕ್ರಿಸ್ತನ ಸಂದೇಶಗಳು ಸರ್ವರಿಗೂ ಏಳಿಗೆಯನ್ನು ಬಯಸುವದಾಗಿವೆ. ಬಡವ-ಬಲ್ಲಿದ, ಜಾತಿ-ವಿಜಾತಿ ಯಾವುದನ್ನೂ ನೋಡದೆ ಮನುಷ್ಯನನ್ನಾಗಿ ನೋಡು ಎನ್ನುವ ತತ್ವವನ್ನು ಇಡೀ ಜಗತ್ತಿಗೆ ಏಸುಕ್ರಿಸ್ತರು ತೋರಿಸಿಕೊಟ್ಟಿದ್ದಾರೆ. ಎಲ್ಲ ಧರ್ಮಗಳೂ ಒಳ್ಳೆಯದನ್ನು ಬಯಸುವಂತೆ ಹೇಳುತ್ತವೆ. ನಮ್ಮ ನೆರೆಹೊರೆಯ ಪರಸ್ಪರರನ್ನು ಪ್ರೀತಿಸದ ಹೊರತು ಮನುಕುಲದ ಉದ್ಧಾರ ಸಾಧ್ಯವಿಲ್ಲ ಎಂಬುದು ಏಸುಕ್ರಿಸ್ತನ ನುಡಿಯಾಗಿತ್ತು. ಇಂತಹ ಮಹಾತ್ಮನನ್ನು ಸ್ಮರಣೆ ಮಾಡುವ ಮೂಲಕ ಜಗತ್ತಿಗೆ ಶಾಂತಿ ಸಂದೇಶವನ್ನು ನೀಡಬೇಕಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಯಶೋಧಾ ನಾಯಕ್, ಪುರಸಭೆ ಸದಸ್ಯರಾದ ವಿಜಯ ಕರಡಿ, ರಾಮಪ್ಪ ಗಡದವರ, ನಾಗರಾಜ ಹಣಗಿ, ಡಿ.ಎಂ. ಪೂಜಾರ, ಶಿವಲಿಂಗ ಹೊತಗಿಮಠ, ಪ್ರೀತಂ, ಪ್ರವೀಣ ಮುಂತಾದವರಿದ್ದರು.

# ದೇಶಕ್ಕಾಗಿ ವಾಜಪೇಯಿಯವರ ಕೊಡುಗೆ ಅಪಾರ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಭಾರತೀಯ ಜನತಾ ಪಾರ್ಟಿ ಜಿಲ್ಲಾ ಕಾರ್ಯಾಲಯದಲ್ಲಿ ಮಾಜಿ ಪ್ರಧಾನಮಂತ್ರಿ ಅಟಲ್ ಬಿಹಾರಿ ವಾಜಪೇಯಿರವರ 100ನೇ ಜನ್ಮದಿನವನ್ನು ಆಚರಿಸಲಾಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಎಂ.ಎಸ್. ಕರಿಗೌಡ್ರ, ಪ್ರಮುಖರಾದ ನಾಗರಾಜ ಕುಲಕರ್ಣಿ ಮಾತನಾಡಿ, ದೇಶಕ್ಕೆ ಅಟಲ್ ಬಿಹಾರಿ ವಾಜಪೇಯಿರವರ ಕೊಡುಗೆ ಹಾಗೂ ಬಿಜೆಪಿ ಪಕ್ಷಕ್ಕಾಗಿ ಅವರು ವಹಿಸಿದ ಶ್ರಮದ ಕುರಿತು ಮಾತನಾಡಿದರು.

ಪ್ರಮುಖರಾದ ಎಂ.ಎಂ. ಹಿರೇಮಠ, ರವಿ ದಂಡಿನ, ಜಗನ್ನಾಥಸಾ ಭಾಂಡಗೆ, ವಿಜಯಕುಮಾರ ಗಡ್ಡಿ ಅವರು ಸಂದರ್ಭೋಚಿತವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಗದಗ ನಗರ ಮಂಡಲ ಅಧ್ಯಕ್ಷ ಅನಿಲ ಅಬ್ಬಿಗೇರಿ, ಪ್ರಮುಖರಾದ ಸುಧೀರ ಕಾಟಿಗರ, ಸಂತೋಷ ಅಕ್ಕಿ, ದೇವಪ್ಪ ಗೊಟೂರ, ಕೆ.ಪಿ. ಕೋಟಿಗೌಡ್ರ, ಬೂದಪ್ಪ ಹಳ್ಳಿ, ರಮೇಶ ಸಜ್ಜಗಾರ, ಅಮರನಾಥ ಗಡಗಿ, ಮಂಜುನಾಥ ಶಾಂತಗೇರಿ, ಮಾಂತೇಶ ಬಾತಾಖಾನಿ, ಸ್ವಾತಿ ಅಕ್ಕಿ, ಯೋಗೇಶ್ವರಿ ಭಾವಿಕಟ್ಟಿ, ವಿಶ್ವನಾಥ ಟೆಂಗಿನಕಾಯಿ, ನಾಗರಾಜ ತಳವಾರ, ಅಪ್ಪು ಕೊಟಗಿ, ಮೇಘಾ ಕೊಟ್ಟೂರ, ಬಸವರಾಜ, ಮೋಹನ ಕೋರಿ, ವಿನಾಯಕ ಹೊರಕೇರಿ, ವಿರೂಪಾಕ್ಷ ಹಸಬಿ, ವಿನೋದ ಹಂಸನೂರ ಮುಂತಾದವರಿದ್ದರು.

# ಅಟಲ್‌ಜೀ ಅವರ ಜೀವನಾದರ್ಶಗಳನ್ನು ರೂಢಿಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇಶ ಕಂಡ ಅಪರೂಪದ, ಮುತ್ಸದ್ಧಿ ರಾಜಕಾರಣಗಳಲ್ಲಿ ಮಾಜಿ ಪ್ರಧಾನಿ, ಭಾರತರತ್ನ ದಿ ಅಟಲ್ ಬಿಹಾರಿ ವಾಜಪೇಯಿ ಅಗ್ರಗಣ್ಯರು ಎನ್ನುವುದರಲ್ಲಿ ಎರಡು ಮಾತಿಲ್ಲ. ಅಜಾತಶತ್ರು ಎಂದೇ ಹೆಸರಾಗಿದ್ದ ಅವರ ಆದರ್ಶ, ಮೌಲ್ಯಾಧಾರಿತ ರಾಜಕಾರಣ ಇಂದಿನ ಯುವ ಪೀಳಿಗೆಗೆ ಸದಾ ಮಾರ್ಗದರ್ಶನವಾಗಿದೆ ಎಂದು ಬಿಜೆಪಿ ಬೂತ್ ಕಮಿಟಿ ಅಧ್ಯಕ್ಷ ಆನಂದ ತವರಿ ಹೇಳಿದರು.

ಅವರು ಬುಧವಾರ ಸಂಜೆ ಶಿಗ್ಲಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಮಾಜಿ ಪ್ರಧಾನಮಂತ್ರಿ ದಿ ಅಟಲ್‌ಬಿಹಾರಿ ವಾಜಪೇಯ ಅವರ ಜನ್ಮದಿನಾಚರಣೆಯ ಸಂದರ್ಭದಲ್ಲಿ ವಾಜಪೇಯಿ



ಅವರ ಭಾವಚಿತ್ರಕ್ಕೆ ಪುಷ್ಪ ಮತ್ತು ನುಡಿ ನಮನ ಸಲ್ಲಿಸಿ ಮಾತನಾಡಿದರು.

ಅಧಿಕಾರಕ್ಕಾಗಿ ಏನನ್ನಾದರೂ ಮಾಡಲು ಸಿದ್ಧರಿರುವ ಇಂದಿನ ರಾಜಕೀಯ ಪರಿಸ್ಥಿತಿಯಲ್ಲಿ ಪಕ್ಷದ ತತ್ವ, ಸಿದ್ಧಾಂತಕ್ಕೆ ಬದ್ಧರಾಗುಳಿದ ಶ್ರೇಯಸ್ಸು ಅಟಲ್‌ಜೀ ಅವರದ್ದಾಗಿದೆ. ಎಲ್ಲ ಜಾತಿ, ಮತ, ಪಂಥ, ಧರ್ಮ ಮತ್ತು ವಿರೋಧ ಪಕ್ಷದವರೂ ಗೌರವದಿಂದ ಕಾಣುವ ಶ್ರೇಷ್ಠ ಶಕ್ತಿ ಅಟಲ್‌ಜೀಯವರದ್ದಾಗಿತ್ತು. ಕವಿ ಹೃದಯಿ, ಮನವತಾವಾದಿಯಾಗಿದ್ದ ಅವರ ಜನ್ಮದಿನವನ್ನು ಉತ್ತಮ ಆಡಳಿತ ದಿನವನ್ನಾಗಿ ಆಚರಿಸುತ್ತಿರುವುದು ಅವರ ವ್ಯಕ್ತಿತ್ವಕ್ಕೆ ಹಿಡಿದ ಕನ್ನಡಿಯಾಗಿದೆ.

ದೇಶದ ಬಡವರು, ರೈತರು, ಕೂಲಿಕಾರರ ಬಗ್ಗೆ ಅಪಾರವಾದ ಪ್ರೀತಿ ಹೊಂದಿದ್ದರು. ದೇಶದ ಪ್ರಗತಿಗಾಗಿ ಉನ್ನತ ಮಟ್ಟದ ಕನಸು ಕಂಡಿದ್ದ ಅವರ ಕ್ರಿಯಾಶೀಲತೆಯಿಂದ ದೇಶ ವಿಶ್ವಮಟ್ಟದಲ್ಲಿ ಗುರುತಿಸುವಂತಾಗಿತ್ತು. ಅವರ ಯೋಚನೆ, ಚಿಂತನೆ, ಸಂಘಟನೆ, ತತ್ವ ಸಿದ್ಧಾಂತಗಳು ಯುವಕರಿಗೆ ಪ್ರೇರಣೆಯಾಗಬೇಕು. ಯುವಕರು ಅಟಲ್‌ಜೀ ಅವರ ಜೀವನಾದರ್ಶಗಳನ್ನು ರೂಢಿಸಿಕೊಳ್ಳುವ ಸಂಕಲ್ಪ ಮಾಡಬೇಕು ಎಂದರು.

ಈ ವೇಳೆ ಪಕ್ಷದ ಮುಖಂಡರಾದ ಸೋಮಣ್ಣ ಡಾಣಗಲ್, ಅಶೋಕ ಶಿರಹಟ್ಟಿ, ಹನಮಂತಪ್ಪ ತಳವಾರ, ಈರಣ್ಣ ಅಕ್ಕೂರ, ಸುರೇಶ ಗೋದಿ, ಸದಾಶಿವ ಬಾಳಿಕಾಯಿ, ಈರಣ್ಣ ಅಳ್ಳಳ್ಳಿ, ನಿಂಗಪ್ಪ ಕುಂಬಾರ, ಈರಣ್ಣ ಪುಟ್ಟಪ್ಪನವರ, ಸಿದ್ದಪ್ಪ ಹರ್ತಿ, ಸಿದ್ಧಾರೂಢ ಗುಲಗಂಜಿ ಮುಂತಾದವರಿದ್ದರು.

# ಯುವಾ ಬ್ರಿಗೇಡ್ ವತಿಯಿಂದ ವಿವೇಕ ಮಾಲಾಧಾರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಯುವಾ ಬ್ರಿಗೇಡ್ ಗದಗ ಸಂಘಟನೆ ವತಿಯಿಂದ ಗದುಗಿನ ಶ್ರೀ ರಾಮಕೃಷ್ಣ ವಿವೇಕಾನಂದ ಆಶ್ರಮದ ದಿವ್ಯತ್ರಯರ ಸನ್ನಿಧಿಯಲ್ಲಿ ಪರಮಪೂಜ್ಯ ಶ್ರೀ ಸ್ವಾಮಿ ಜಗನ್ನಾಥಾನಂದಜೀಯುವರ ಸಾನ್ನಿಧ್ಯದಲ್ಲಿ ಯುವಾ ಬ್ರಿಗೇಡ್‌ನ ಕಾರ್ಯಕರ್ತರು ವಿವೇಕ ಮಾಲಾ ಧಾರಣೆ ಮಾಡಿದರು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿದ್ದ ಪೂಜ್ಯ ಶ್ರೀ



ಜಗನ್ನಾಥಾನಂದಜೀಯುವರು ಮಾತನಾಡಿ, ಪ್ರತಿವರ್ಷದಂತೆ ಡಿಸೆಂಬರ್ 25ರಂದು ಆಚರಿಸುವ ರಾಕ್ ಡೇಯಿಂದ ಜನೆವರಿ 12ರ ವಿವೇಕಾನಂದರ ಜಯಂತಿ ಹಾಗೂ ರಾಷ್ಟ್ರೀಯ ಯುವ ದಿನಾಚಣೆಯುವರೆಗೆ 18 ದಿನಗಳ ಕಾಲ ವಿವೇಕ ಮಾಲೆ ಅಭಿಯಾನದ ಆಚರಣೆಯನ್ನು ಆಯೋಜಿಸಲಾಗುತ್ತದೆ. ಈ ದಿನ ಸ್ವಾಮಿ ವಿವೇಕಾನಂದರು ಕನ್ಯಾಕುಮಾರಿ ಬಂಡೆಯ ಮೇಲೆ ಧ್ಯಾನಸ್ಥರಾಗಿ ಕುಳಿತ ದಿನವಾಗಿದೆ. ಈ ದಿನವನ್ನು ಯುವಾ ಬ್ರಿಗೇಡ್ ಸಂಘಟನೆ ವತಿಯಿಂದ ರಾಮಕೃಷ್ಣ ವಿವೇಕಾನಂದ ಆಶ್ರಮದ ಸಹಯೋಗದಲ್ಲಿ ರಾಷ್ಟ್ರಾದ್ಯಂತ 'ರಾಕ್ ಡೇ' ಎಂದು ಆಚರಿಸಲಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಸಂಚಾಲಕರಾದ ಮಂಜುನಾಥ ಜಕ್ಕಲಿ, ಕಪಿಲ್ ಜಿ., ಆನಂದ ಕುರವತ್ತಿ, ವಿಜಯಕುಮಾರ್, ಪಾಂಡು ಚವ್ಹಾಣ, ಗುರು ಹೊಸಂಗಡಿ, ಸಂಗಮೇಶ ಹಡಪದ, ಮಂಜು ಹಿಂಡಿ, ವಿನಾಯಕ, ಶಿವರಾಜ ಸೇರಿದಂತೆ ಯುವಾ ಬ್ರಿಗೇಡ್ ಕಾರ್ಯಕರ್ತರು, ಆಶ್ರಮದ ಪೂಜ್ಯರು ಉಪಸ್ಥಿತರಿದ್ದರು.



ಗದಗ-ಬೆಟಗೇರಿಯ ವಾರ್ಡ್ ನಂ.33ರ ಬಿಜೆಪಿ ಕಛೇರಿಯಲ್ಲಿ ಭಾರತರತ್ನ ದಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮದಿನವನ್ನು ಉತ್ತಮ ಆಡಳಿತ ದಿನವನ್ನಾಗಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ವಾರ್ಡಿನ ನಗರಸಭೆ ಸದಸ್ಯೆ ಅನಿತಾ ಗಡ್ಡಿ, ಬಿಜೆಪಿ ಮುಖಂಡರಾದ ವಿಜಯಕುಮಾರ ಗಡ್ಡಿ, ಕುಶಾಲ ವಡೆಯರ್, ವಿಶ್ವನಾಥ ಟೆಂಗಿನಕಾಯಿ, ವಿರೂಪಾಕ್ಷ ನಸಲಿ, ರಾಜು ಪಟ್ಟಣಶೆಟ್ಟಿ, ಶಂಕರಯ್ಯ ಕೂಡ್ಲಪ್ ನವರ್, ಶ್ರೀಶೈಲ್ ಚಳಗೇರಿ, ವೀರೇಶ ಪುರದ, ಅಮೃತ್ ಶಾನುಭೋಗರ ಮುಂತಾದವರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka